ಭಾನುವಾರ 09.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 95
Digital Varthe Kannada Daily
Volume 01 - Issue 95
Sunday 09.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಅಂತ್ಯಕ್ರಿಯೆ ವೇಳೆ ಉಸಿರಾಡಿ, ಕಣ್ತೆರೆದ 38ರ ವ್ಯಕ್ತಿ



**ಗದಗ:** ಉತ್ತರ ಕರ್ನಾಟಕದ ಗದಗ ಜಿಲ್ಲೆಯ ಬೆಟಗೇರಿ ಪಟ್ಟಣದಲ್ಲಿ ಚಪ್ಪಟೆ ಆಶ್ಚರ್ಯಕರ ಘಟನೆ ನಡೆದಿದೆ. 38 ವರ್ಷದ ನಾರಾಯಣ ಹೊನ್ನಲ್ ಎಂಬ ವ್ಯಕ್ತಿಗೆ ಧಾರವಾಡದ ಖಾಸಗಿ ಆಸ್ಪತ್ರೆಯಲ್ಲಿ ಪಿತ್ತಕೋಶದ ತೀವ್ರ ಸಮಸ್ಯೆಯಿಂದಾಗಿ ಸುಮಾರು 6 ಗಂಟೆಗಳ ಶಸ್ತ್ರಚಿಕಿತ್ಸೆ ನಡೆದಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ನಾರಾಯಣ ಸಾವನ್ನಪ್ಪಿದ್ದರು. ಕುಟುಂಬಸ್ಥರು ಗದಗ ಜಿಲ್ಲೆಯಲ್ಲಿ ಅಂತ್ಯಸಂಸ್ಕಾರಕ್ಕೆ ಸಿದ್ಧತೆ ಮಾಡಿಕೊಂಡು, ಶ್ರದ್ಧಾಂಜಲಿ ಬ್ಯಾನರ್‌ಗಳನ್ನು ಹಾಕಿದ್ದರು. ಕುಟುಂಭದವರೂ ಸಹ ಸಹ ಆಗಮಿಸಿದ್ದರು. ಆದರೆ, ದೇಹವನ್ನು ಮನೆಗೆ ತರಿಸುತ್ತಿದ್ದಂತೆ ನಾರಾಯಣ ಅವರು ಮತ್ತೆ ಉಸಿರಾಡಿ, ಕಣ್ಣು ತೆರೆದಿದ್ದಾರೆ.

ನಾರಾಯಣ ಹೊನ್ನಲ್ ಅವರು ಬೆಟಗೇರಿ ನಿವಾಸಿಯಾಗಿದ್ದು, ಕುಟುಂಬದ ಏಕೈಕ ಆಧಾರವಾಗಿದ್ದರು. ಕಳೆದ ಕೆಲವು ದಿನಗಳಿಂದ ಪಿತ್ತಕೋಶದಲ್ಲಿ ತೀವ್ರ ನೋವು, ಜ್ವರ ಮತ್ತು ದುರ್ಬಲತೆಯಿಂದ ತೊಂದರೆ ಅನುಭವಿಸುತ್ತಿದ್ದರು. ಧಾರವಾಡದ ಖಾಸಗಿ ಆಸ್ಪತ್ರೆಯಲ್ಲಿ ವೈದ್ಯರು ತುರ್ತು ಶಸ್ತ್ರಚಿಕಿತ್ಸೆಗೆ ಹೊರಟಿದ್ದರು. ಸುಮಾರು 6 ಗಂಟೆಗಳ ಕಷ್ಟಕರ ಪ್ರಕ್ರಿಯೆಯ ನಂತರ ವೈದ್ಯರು ನಾರಾಯಣ ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದರು. ಕುಟುಂಬಸ್ಥರು ದುಃಖದಲ್ಲಿರುವಾಗ, ದೇಹವನ್ನು ಆಂಬ್ಯುಲೆನ್ಸ್ ಮೂಲಕ ಬೆಟಗೇರಿ ಮನೆಗೆ ತರಿಸಿದ್ದರು. ಮಾರ್ಗದಲ್ಲಿ ದೇಹದಲ್ಲಿ ಸ್ವಲ್ಪ ಚಲನೆ ಕಂಡು ಬಂದರೂ, ಕುಟುಂಬಸ್ಥರು ಅದಕ್ಕೆ ಹೆಚ್ಚು ಗಮನ ಕೊಡದೇ ದೇಹವನ್ನ ಮನೆಗೆ ತಂದಿದ್ದರು.

ಮನೆಗೆ ಬರುತ್ತಿದ್ದಂತೆ ನಾರಾಯಣ ಅವರು ಆಕಸ್ಮಿಕವಾಗಿ ಉಸಿರಾಡುತ್ತಾ ಕಂಡುಬಂದರು. ಕಣ್ಣು ತೆರೆದು ಸುತ್ತಲೂ ನೋಡುತ್ತಾ, ದುರ್ಬಲವಾಗಿ ಮಾತನಾಡುವ ಪ್ರಯತ್ನ ಮಾಡಿದ್ದಾರೆ. ಇದನ್ನು ಕಂಡ ಮನೆಯವರು ಆಶ್ಚರ್ಯ ಪಟ್ಟಿದ್ದಾರೆ. ತಕ್ಷಣ ಬೆಟಗೇರಿ ಖಾಸಗಿ ಆಸ್ಪತ್ರೆಗೆ ದಾಖಲಿಸಿ, ತುರ್ತು ಚಿಕಿತ್ಸೆ ಆರಂಭಿಸಲಾಗಿದೆ. ಸದ್ಯ ನಾರಾಯಣ ಅವರಿಗೆ ಚಿಕಿತ್ಸೆ ನಡೆಯುತ್ತಿದ್ದು, ವೈದ್ಯರು ತಮ್ಮ ವರದಿಯಲ್ಲಿ, ಶಸ್ತ್ರಚಿಕಿತ್ಸೆಯ ಸಮಯದಲ್ಲಿ ಹೃದಯನಾಳ ಸಂಬಂಧಿತ ಸಮಸ್ಯೆಯಿಂದಾಗಿ ಪ್ರಾಣ ಹೋದಂತೆ ಕಂಡುಬಂದಿತ್ತು. ಆದರೆ, ದೇಹದ ತಂಪು ಆಗದೆ ಇರುವುದು ಮತ್ತು ಆಂಬ್ಯುಲೆನ್ಸ್‌ನ ಚಲನೆಯಿಂದಾಗಿ ಸ್ವಲ್ಪ ಚೇತರಿಕೆ ಸಾಧ್ಯವಾಗಿದ್ದು, ಇದು ಅಪರೂಪದ ಘಟನೆ ಎಂದು ಹೇಳಿದ್ದಾರೆ.

ಈ ಘಟನೆಯು ವೈದ್ಯಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ವೈದ್ಯರು ಇದನ್ನು "ಲೇಟ್ ಡಿಸ್ಟೆಕ್ಷನ್ ಆಫ್ ಡೆತ್" ಎಂದು ವಿವರಿಸುತ್ತಿದ್ದಾರೆ. ಶಸ್ತ್ರಚಿಕಿತ್ಸೆಯ ಸಮಯದಲ್ಲಿ ಹೃದಯನಾಳದಲ್ಲಿ ಸಮಸ್ಯೆ ಉಂಟಾಗಿ ಪ್ರಾಣ ಹೋದಂತೆ ಕಂಡುಬಂದರೂ, ದೇಹದ ತಂಪು ಆಗದೆ ಇರುವುದು ಮತ್ತು ಚಲನೆಯಿಂದಾಗಿ ಹೃದಯನಾಳಕ್ಕೆ ರಕ್ತ ಪರಿಚಲನೆ ಮತ್ತೆ ಆರಂಭವಾಗಿರಬಹುದು ಎಂದು ಹೇಳುತ್ತಿದ್ದಾರೆ. ಇಂತಹ ಘಟನೆಗಳು ಅಪರೂಪವಾದರೂ, ವೈದ್ಯಕೀಯ ಜಗತ್ತಿನಲ್ಲಿ "ಲೇಜಾರ್ಡ್ ರಿಫ್ಲೆಕ್ಸ್" ಅಥವಾ "ಸಾಲ್ಟ್ ಎಫೆಕ್ಟ್" ಎಂಬ ಪರಿಣಾಮಗಳಿಂದ ಸಾಧ್ಯ ಎಂದು ವಿಜ್ಞಾನ ತಿಳಿಸುತ್ತದೆ.

ಸ್ಥಳೀಯರು ದೇವರ ಕೃಪೆಯಿಂದ ನಾರಾಯಣ ಅವರು ಮತ್ತೆ ಜೀವಂತರಾಗಿದ್ದಾರೆ ಎಂದು ನಂಬುತ್ತಿದ್ದಾರೆ. ಕುಟುಂಬಸ್ಥರು "ಬೇಗ ಗುಣಮುಖರಾಗಿ ಮನೆಗೆ ಬರಲಿ" ಎಂದು ಪ್ರಾರ್ಥಿಸುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ವೀಡಿಯೋಗಳು ಮತ್ತು ಬ್ಯಾನರ್‌ಗಳು ಈ ಘಟನೆಯನ್ನು ರಾಜ್ಯಾದ್ಯಂತ ಹಬ್ಬಿಸಿವೆ. ವೈದ್ಯರು ನಾರಾಯಣ ಅವರ ಸ್ಥಿತಿಯನ್ನು ಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ಈ ಘಟನೆಯು ಜೀವನದ ಅದ್ಭುತತೆಯನ್ನು ಮತ್ತೊಮ್ಮೆ ಸ್ಮರಿಸುತ್ತದೆ.ಈ ಅಪರೂಪದ ಘಟನೆಯು ವೈದ್ಯಕೀಯ ತಜ್ಞರನ್ನು ಸಹ ಆಕರ್ಷಿಸಿದ್ದು, ಇದರ ಬಗ್ಗೆ ವಿಶೇಷ ಅಧ್ಯಯನ ನಡೆಸುವ ಸಾಧ್ಯತೆಯಿದೆ.

## ಮೀನು ಹಿಡಿಯುವಾಗ ವಿದ್ಯುತ್ ಸ್ಪರ್ಶಿಸಿ ಮಹಿಳೆ ಸಾವು



**ಚಿಕ್ಕಬಳ್ಳಾಪುರ:** ಕೆರೆಯಲ್ಲಿ ಮೀನು ಹಿಡಿಯುವ ವೇಳೆ ವಿದ್ಯುತ್ ಸ್ಪರ್ಶಿಸಿ ಮಹಿಳೆ ಸಾವನ್ನಪ್ಪಿದ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆ ಚೇಳೂರು ತಾಲೂಕಿನ ದಿಗುವನೆಟ್ಟಕುಂಟಪಲ್ಲಿ ಗ್ರಾಮದ ಬಳಿ ನಡೆದಿದೆ.

ದಿಗುವನೆಟ್ಟಕುಂಟಪಲ್ಲಿ ಗ್ರಾಮದ ಅಶಾಬೀ (54) ಮೃತ ದುರ್ದೈವಿ. ಆಶಾಬೀ ಹಾಗೂ ಪತಿ ಮಾಬುಸಾಬ್ ಮೀನು ಹಿಡಿಯುವ ಕಾಯಕದಿಂದ ಜೀವನ ನಡೆಸುತ್ತಿದ್ದರು. ಪತಿ ಮಾಬುಸಾಬ್ ಜೊತೆ ಮೀನು ಹಿಡಿಯಲು ಹೋಗಿದ್ದ ವೇಳೆ ದುರ್ಘಟನೆ ಸಂಭವಿಸಿದೆ. ಹಗಲಿನಲ್ಲಿ ಕೆರೆಯಲ್ಲಿ ಬಲೆ ಹಾಕಿ ರಾತ್ರಿ ವೇಳೆ ಮೀನುಗಳನ್ನ ಹಿಡಿಯಲು ಹೋಗಿದ್ದರು. ತೆಪ್ಪದಲ್ಲಿ ಹೋಗಿದ್ದ ವೇಳೆ ಕೆರೆ ಒಳಗೆ ಇರುವ ವಿದ್ಯುತ್ ಕಂಬದ ತಂತಿ ತಗುಲಿ ದುರಂತ ನಡೆದಿದ್ದು, ವಿದ್ಯುತ್ ಶಾಕ್ ಹೊಡೆದು ಕೆರೆಯಲ್ಲಿ ಬಿದ್ದು ಆಶಾಬೀ ಮೃತಪಟ್ಟಿದ್ದಾರೆ.

ಕೆರೆಯಲ್ಲಿ ಹಾದು ಹೋಗಿದ್ದ ವಿದ್ಯುತ್ ಕಂಬದಿಂದ ತಂತಿ ಕಟ್ ಆಗಿ ನೀರಿನಲ್ಲಿ ನೇತಾಡುತ್ತಿತ್ತು. ವಿದ್ಯುತ್ ತಂತಿ ಕಟ್ ಆಗಿ ಬಿದ್ದಿದ್ದರಿಂದಲೇ ದುರಂತ ಸಂಭವಿಸಿದೆ ಎನ್ನಲಾಗಿದೆ. ಘಟನೆಯಲ್ಲಿ ಪತಿ ಮಾಬುಸಾಬ್‌ಗೂ ವಿದ್ಯುತ್ ಶಾಕ್ ಹೊಡೆದು ಗಾಯಗಳಾಗಿವೆ. ಅಗ್ನಿಶಾಮಕ ದಳದ ಸಿಬ್ಬಂದಿ ನಿರಂತರ ಕಾರ್ಯಾಚರಣೆ ನಡೆಸಿ ಮಹಿಳೆಯ ಶವ ಹೊರಕ್ಕೆ ತೆಗೆದಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿ ಮೀನಿನ ಬಲೆಯಿಂದಲೇ ಶವ ಹೊರಕ್ಕೆ ತೆಗೆದಿದ್ದಾರೆ. ಚೇಳೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಚಾಲಕನ ನಿಯಂತ್ರಣ ತಪ್ಪಿ ಆಟೋ ಪಲ್ಟಿ: ಯುವತಿ ಸಾವು



**ಕೊಪ್ಪಳ:** ಗಂಗಾವತಿ ತಾಲೂಕಿನ ವಡ್ಡರ ಹಟ್ಟಿ ಗ್ರಾಮದ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಆಟೋ ಪಲ್ಟಿಯಾಗಿ ಯುವತಿ ಸಾವನ್ನಪ್ಪಿರುವ ದಾರುಣ ಘಟನೆ ನಡೆದಿದೆ. ಮೃತಳನ್ನು ಮದ ಪ್ರೇಮಾ (18) ಎಂದು ಗುರುತಿಸಲಾಗಿದೆ. ಆಕೆ ಸ್ಥಳೀಯವಾಗಿ ಪ್ರಸಿದ್ಧವಾಗಿದ್ದ ವಿದ್ಯಾರ್ಥಿನಿಯಾಗಿದ್ದು, ಕುಟುಂಬದವರಲ್ಲಿ ಆಘಾತದ ಅಲೆ ಉಂಟಾಗಿದೆ.

ಮಾಹಿತಿ ಪ್ರಕಾರ, ಮದ ಪ್ರೇಮಾ ಹಾಗೂ ಇತರ ಐವರು ಸೇರಿ ಒಟ್ಟು ಆರು ಜನರು ಆಟೋದಲ್ಲಿ ಪ್ರಯಾಣಿಸುತ್ತಿದ್ದರು. ಅವರು ಬಸಾಪಟ್ಟಣದಿಂದ ಗಂಗಾವತಿಗೆ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ವೇಗವಾಗಿ ಚಲಿಸುತ್ತಿದ್ದ ಆಟೋ ವಡ್ಡರಹಟ್ಟಿ ಗ್ರಾಮದ ಬಳಿ ತಿರುವು ಮುಟ್ಟುವ ವೇಳೆಗೆ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಪ್ರಯಾಣಿಕರು ಆಟೋದಿಂದ ಎಸೆದಿಳಿದಿದ್ದಾರೆ.

ಅಪಘಾತದಲ್ಲಿ ಮದ ಪ್ರೇಮಾ ತೀವ್ರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟರೆ, ಇನ್ನುಳಿದ ಐವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಥಳೀಯರು ತಕ್ಷಣವೇ ಘಟನಾ ಸ್ಥಳಕ್ಕೆ ಧಾವಿಸಿ ಗಾಯಗೊಂಡವರನ್ನು ಹತ್ತಿರದ ಖಾಸಗಿ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ನೀಡಲು ಸಹಕರಿಸಿದ್ದಾರೆ. ಆಸ್ಪತ್ರೆ ಮೂಲಗಳ ಪ್ರಕಾರ ಗಾಯಗೊಂಡವರಲ್ಲಿ ಇಬ್ಬರ ಸ್ಥಿತಿ ಆತಂಕಕಾರಿ ಎಂದು ತಿಳಿದುಬಂದಿದೆ.

ಘಟನೆ ನಡೆದ ತಕ್ಷಣ ಗಂಗಾವತಿ ನಗರ ಸಂಚಾರಿ ಠಾಣಾ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಪಲ್ಟಿಯಾದ ಆಟೋವನ್ನು ವಶಕ್ಕೆ ಪಡೆದಿದ್ದಾರೆ. ಅಪಘಾತದ ನಿಖರ ಕಾರಣವನ್ನು ತಿಳಿದುಕೊಳ್ಳಲು ಪೊಲೀಸರು ತನಿಖೆ ಆರಂಭಿಸಿದ್ದು, ಚಾಲಕನ ಅಜಾಗರೂಕತೆ ಮತ್ತು ವೇಗ ನಿಯಂತ್ರಣ ಕಳೆದುಕೊಂಡಿರುವುದೇ ದುರಂತಕ್ಕೆ ಕಾರಣವೆಂದು ಪ್ರಾಥಮಿಕ ಮಾಹಿತಿ ತಿಳಿಸಿದೆ.

ಗ್ರಾಮಸ್ಥರು ಈ ಘಟನೆಯ ಕುರಿತು ದುಃಖ ವ್ಯಕ್ತಪಡಿಸಿದ್ದು, ಅಜಾಗರೂಕ ಚಾಲನೆಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಬಹು ಕೋಟಿ ವಂಚನೆ ಕೇಸ್ – 2.85 ಕೋಟಿ ಮೌಲ್ಯದ ಆಸ್ತಿ ಮುಟ್ಟುಗೋಲು




**ಮಂಗಳೂರು:** ಉದ್ಯಮಿಗಳಿಗೆ ಸಾಲ ಕೊಡಿಸೋದಾಗಿ ಕೋಟಿ ಕೋಟಿ ವಂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ವಂಚಕ ರೋಷನ್ ಸಲ್ಡಾನ 2.85 ಕೋಟಿ ರೂ. ಮೌಲ್ಯದ ಆಸ್ತಿ ಇಡಿ (ಜಾರಿ ನಿರ್ದೇಶನಾಲಯ) ಅಧಿಕಾರಿಗಳು ತಾತ್ಕಾಲಿಕ ಮುಟ್ಟುಗೋಲು ಹಾಕಿಕೊಂಡಿದ್ದಾರೆ.

ಮಂಗಳೂರು ಉಪವಲಯ ಕಚೇರಿ ಅಧಿಕಾರಿಗಳು ರೋಷನ್ ಸಲ್ಡಾನ ಮನೆ ಮತ್ತು ಬ್ಯಾಂಕ್ ಖಾತೆ ಸೇರಿ 2.85 ಕೋಟಿ ರೂ. ಮೌಲ್ಯದ ಆಸ್ತಿಯನ್ನು ತತ್ಕಾಲಿಕ ಮುಟ್ಟುಗೋಲು ಹಾಕಿದ್ದಾರೆ. ರೋಷನ್ ಸಲ್ಡಾನ ಕೋಟಿಗಟ್ಟಲೆ ಸಾಲ ಕೊಡಿಸುವ ಆಮಿಷವೊಡ್ಡಿ ದೇಶದ ಐಷಾರಾಮಿ ವ್ಯಕ್ತಿಗಳು ಹಾಗೂ ಉದ್ಯಮಿಗಳಿಗೆ 200 ಕೋಟಿ ರೂ.ಗೂ ಅಧಿಕ ಹಣ ವಂಚನೆ ಮಾಡಿದ್ದ. ಈ ಸಂಬಂಧ ರೋಷನ್ ಸಲ್ಡಾನ, ಆತನ ಪತ್ನಿ ಢಫ್ನಿನೀತು ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಇದರ ಆಧಾರದ ಮೇಲೆ ಇಡಿ ಅಧಿಕಾರಿಗಳು ತನಿಖೆ ನಡೆಸಿದ್ದರು. ಈ ಹಿಂದೆ ಸುಮಾರು 9.5 ಕೋಟಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿತ್ತು. ಇನ್ನೂ ಆತನ ಐಷಾರಾಮಿ ಬಂಗಲೆಯನ್ನು ಕಂಡು ಅಧಿಕಾರಿಗಳೇ ದಂಗಾಗಿದ್ದರು.


ನೂರಾರು ಕೋಟಿ ಸಾಲ ಕೊಡಿಸುವುದಾಗಿ ಐದರಿಂದ ಹತ್ತು ಕೋಟಿ ರೂ. ಮುಂಗಡ ಹಣ ಪಡೆದು ರೋಷನ್ ಸಲ್ಡಾನ ಮೋಸ ಮಾಡುತ್ತಿದ್ದ. ಈ ಸಂಬಂಧ ಇಬ್ಬರು ಉದ್ಯಮಿಗಳು ನೀಡಿದ್ದ ದೂರಿನ ಆಧಾರದಲ್ಲಿ ಕಳೆದ ಜು.17 ರಂದು ರೋಷನ್ ಸಲ್ಡಾನನನ್ನು ಮಂಗಳೂರು ಪೊಲೀಸರು ಬಂಧಿಸಿದ್ದರು

## ಸಿಮೆಂಟ್ ಮಿಕ್ಸರ್ ಲಾರಿ ಅವಾಂತರಕ್ಕೆ ಕುಸಿದ ಗೋಡೆ – ಮಗು ಸಾವು



**ಬೆಂಗಳೂರು:** ಸಿಮೆಂಟ್ ಮಿಕ್ಸರ್ ಲಾರಿಗೆ ವಿದ್ಯುತ್ ವೈರಿಂಗ್ ತಂತಿ ತಗುಲಿ ಎಳೆದೊಯ್ದ ಪರಿಣಾಮ, ಮನೆಯ ಗೋಡೆ ಕುಸಿದು ಮಗು ಸಾವನ್ನಪ್ಪಿದ ಘಟನೆ ಕುಂದಲಹಳ್ಳಿ ಕಾಲೋನಿಯಲ್ಲಿ ನಡೆದಿದೆ.


ಮೃತ ಮಗುವನ್ನು ಸಿದ್ದಪ್ಪ ಹಾಗೂ ಲಾವಣ್ಯ ದಂಪತಿಯ ಪುತ್ರ ಪ್ರಣವ್ (1 ವರ್ಷ 8 ತಿಂಗಳು) ಎಂದು ಗುರುತಿಸಲಾಗಿದೆ. ನ.7ರ ಸಂಜೆ ಹೊಸ ಮನೆಯೊಂದರ ಮೋಲ್ಡಿಂಗ್ ಕೆಲಸ ಮುಗಿಸಿ ಸಿಮೆಂಟ್ ಮಿಕ್ಸರ್ ಲಾರಿ ಹೋಗುತ್ತಿತ್ತು. ಈ ವೇಳೆ ಮೇಲೆ ಹಾದು ಹೋಗಿರುವ ವೈರಿಂಗ್ ವಿದ್ಯುತ್ ತಂತಿ ಲಾರಿಗೆ ಸಿಲುಕಿಕೊಂಡಿದೆ. ತಕ್ಷಣ ಸ್ಥಳೀಯರು ಕೂಗಿಕೊಂಡಿದ್ದಾರೆ. ಆದರೆ ಚಾಲಕ ಗಮನಿಸದೇ ಲಾರಿ ಚಲಾಯಿಸಿದ್ದರಿಂದ




ವೈರಿಂಗ್ ಕಂಬ ಕಿತ್ತು ಬಂದಿದೆ. ಅಲ್ಲದೇ ಮನೆಯ ಗೋಡೆ ಕುಸಿದು ಆಟ ಆಡ್ತಿದ್ದ ಮಗುವಿನ ಮೇಲೆ ಬಿದ್ದಿದೆ ಗಂಭೀರವಾಗಿ ಗಾಯಗೊಂಡ ಮಗುವನ್ನು ಆಸ್ಪತ್ರೆಗೆ ಕರೆದೊಯ್ಯು ವಷ್ಟರಲ್ಲೇ ಸಾವನ್ನಪ್ಪಿದೆ. ಮಗುವಿನ ಶವವನ್ನು ಬೌರಿಂಗ್ ಆಸ್ಪತ್ರೆ ಶವಾಗಾರಕ್ಕೆ ರವಾನಿ ಸಲಾಗಿದೆ. ಮೃತ ಮಗುವಿನ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ.

ಈ ಸಂಬಂಧ ಹೆಚ್‌ಎಎಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆ ಬಳಿಕ ಲಾರಿ ಚಾಲಕ ಪರಾರಿಯಾಗಿದ್ದಾನೆ

## ವಿಕೃತ ಕಾಮಿ ಉಮೇಶ್ ರೆಡ್ಡಿ ,ತರುಣ್ ಜೈಲಲ್ಲಿ ಬಿಂದಾಸ್ ಲೈಫ್!



**ಬೆಂಗಳೂರು :** ಪರಪ್ಪನ ಅಗ್ರಹಾರ ಜೈಲಿನಲ್ಲಿ ಎಲ್ಲವೂ ಖುಲ್ಲಂ ಖುಲ್ಲ ಎನ್ನುವಂತಾಗಿದೆ. ಈ ಹಿಂದೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ಇದ್ದ ವೇಳೆ ಸಿಕ್ಕ ರಾಜಾತಿಥ್ಯಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಕಟುವಾಗಿ ಟೀಕಿಸಿತ್ತು. ಇದೀಗ ಮತ್ತೊಂದು ರಾಜಾತಿಥ್ಯ ಕೇಸ್‌ಗೆ ಪರಪ್ಪನ ಅಗ್ರಹಾರ ಜೈಲು ಸುದ್ದಿಯಾಗಿದೆ.

ಹೌದು. ವಿಕೃತ ಕಾಮಿ ಉಮೇಶ್ ರೆಡ್ಡಿ ಹಾಗೂ ಗೋಲ್ಡ್ ಸ್ಮಗ್ಲಿಂಗ್ ಕೇಸ್‌ನಲ್ಲಿ ಬಂಧನ ಆಗಿರುವ ನಟಿ ರನ್ಯಾ ರಾವ್ ಪ್ರಿಯಕರ ತರುಣ್ ರಾಜ್ (Tarun Raj) ಜೈಲಿನಲ್ಲಿ ಬಿಂದಾಸ್ ಲೈಫ್ ನಡೆಸುತ್ತಿರುವ ವಿಡಿಯೋ ವೈರಲ್ ಆಗಿದೆ.

**ವಿಕೃತ ಕಾಮಿಯ ಬಿಂದಾಸ್ ಲೈಫು**



ಅತ್ಯಾಚಾರ ಪ್ರಕರಣದಲ್ಲಿ ಗಲ್ಲು ಶಿಕ್ಷೆಗೆ ಗುರಿಯಾಗಿರುವ ಉಮೇಶ್ ರೆಡ್ಡಿ ಪರಪ್ಪನ ಅಗ್ರಹಾರ ಜೈಲಿನಲ್ಲಿ ಬಿಂದಾಸ್ ಲೈಫ್ ನಡೆಸುತ್ತಿದ್ದಾನೆ. ವಿಕೃತ ಕಾಮಿಗೆ ಜೈಲಿನಲ್ಲಿ ಟಿವಿ, ಮೊಬೈಲ್ ಸೌಭಲಭ್ಯ ನೀಡಲಾಗಿದೆ. ಜೊತೆಗೆ ತನಗೆ ಬೇಕಾದ ಅಡುಗೆ ಮಾಡಿಕೊಳ್ಳಲು ಜೈಲಿನೊಳಗೇ ಅಧಿಕಾರಿಗಳು ಸೌಲಭ್ಯ ಕಲ್ಪಿಸಿದ್ದಾರೆ. ಉಮೇಶ್ ರೆಡ್ಡಿ ಟಿವಿ ನೋಡ್ತಾ, ಆಂಡ್ರಾಯ್ಡ್ ಮತ್ತು ಕೀಪ್ಯಾಡ್ ಮೊಬೈಲ್ ಗಳನ್ನಿಟ್ಟುಕೊಂಡು ಮಾತನಾಡುತ್ತಿರುವ ವೀಡಿಯೊ ವೈರಲ್ ಆಗಿದೆ. ಇದರಿಂದ ಸೌಲಭ್ಯ ಕೊಟ್ಟ ಜೈಲಾಧಿಕಾರಿಗಳಿಗೆ ಸಂಕಷ್ಟ ಎದುರಾಗಿದೆ.

**ರನ್ಯಾ ರಾವ್ ಪ್ರಿಯಕರನಿಗೂ ಹೈಫೈ ಟ್ರೀಟ್ಮೆಂಟ್**

ಉಮೇಶ್ ರೆಡ್ಡಿ ಅಷ್ಟೇ ಅಲ್ಲ, ಗೋಲ್ಡ್ ಸ್ಮಗ್ಲಿಂಗ್ ಕೇಸ್‌ನಲ್ಲಿ ಬಂಧನ ಆಗಿರುವ ರನ್ಯಾ ರಾವ್ ಪ್ರಿಯಕರ ತೆಲುಗು ಸಿನಿಮಾ ನಟ ತರುಣ್ ರಾಜ್ ಕೂಡ ಬಿಂದಾಸ್ ಲೈಫ್ ಲೀಡ್ ಮಾಡ್ತಿದ್ದಾನೆ. ಮೊಬೈಲ್



ಜೊತೆಗೆ ಟಿವಿ ಸೌಲಭ್ಯ ಕಲ್ಪಿಸಿರೋದು ವೈರಲ್ ಆಗಿರುವ ವಿಡಿಯೋದಿಂದ ಗೊತ್ತಾಗಿದೆ. ಒಟ್ಟಿನಲ್ಲಿ ಕೈದಿಗಳ ರಾಜಾತಿಥ್ಯಕ್ಕೆ ಹೆಸರುವಾಸಿಯಾಗಿರುವ ಪರಪ್ಪನ ಅಗ್ರಹಾರ ಜೈಲಿನ ಅಧಿಕಾರಿಗಳು, ಸಿಬ್ಬಂದಿಗೆ ಈಗ ಸಂಕಷ್ಟ ಎದುರಾಗಿದ್ದು, ಮುಂದಿನ ಕ್ರಮ ಕಾದುನೋಡಬೇಕಿದೆ.

**ಉಮೇಶ್ ರೆಡ್ಡಿ ಕೇಸ್ ಏನು?**

1998 ರ ಫೆ. 28 ರಂದು ಬೆಂಗಳೂರು ನಗರದಲ್ಲಿ ನಡೆದಿದ್ದ ಮಹಿಳೆ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಉಮೇಶ್ ರೆಡ್ಡಿಗೆ ಮರಣ ದಂಡನೆ ಶಿಕ್ಷೆ ವಿಧಿಸಲಾಗಿತ್ತು. ಈ ಶಿಕ್ಷೆಯನ್ನು ಜೀವಾವಧಿ ಶಿಕ್ಷೆಯನ್ನಾಗಿ ಸುಪ್ರೀಂ ಕೋರ್ಟ್ ಮಾರ್ಪಾಡು ಮಾಡಿ ಆದೇಶಿಸಿತ್ತು. ಅಲ್ಲದೆ, ನ್ಯಾಯಾಲಯಕ್ಕೆ ಪೆರೋಲ್ ಸೇರಿದಂತೆ ಯಾವುದೇ ರೀತಿಯ ಅರ್ಜಿ ಸಲ್ಲಿಸಬೇಕು ಎಂದಾದರೆ ಕನಿಷ್ಟ 30 ವರ್ಷಗಳ ಕಾಲ ಶಿಕ್ಷೆ ಅನುಭವಿಸಬೇಕು ಎಂದು ಸುಪ್ರೀಂ ಕೋರ್ಟ್ ತಿಳಿಸಿತ್ತು.

## ದೆಹಲಿಯ ರಿಥಾಲಾ ಮೆಟ್ರೋ ನಿಲ್ದಾಣದ ಬಳಿ ಭಾರಿ ಬೆಂಕಿ ದುರಂತ



ದೆಹಲಿಯ ರೋಹಿಣಿ ಪ್ರದೇಶದ ರಿಥಾಲಾ ಮೆಟ್ರೋ ನಿಲ್ದಾಣದ ಬಳಿ ಭಾರಿ ಬೆಂಕಿ ಅವಘಡ ಸಂಭವಿಸಿದ್ದು, ಹಲವು ಗುಡಿಸಲುಗಳು ಸಂಪೂರ್ಣವಾಗಿ ಸುಟ್ಟುಹೋಗಿವೆ. ಈ ಘಟನೆಯಲ್ಲಿ ಒಬ್ಬರು ಸತ್ತು, ಮಗು ಸೇರಿ ಇಬ್ಬರು ಗಾಯಗೊಂಡಿದ್ದಾರೆ ಎಂದು ದೆಹಲಿ ಫೈರ್ ಸರ್ವೀಸಸ್ (DFS) ಅಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ಬಸ್ತಿ ಎಂಬ ದಟ್ಟವಾಸಿ ಬಡಾವಣೆಯಲ್ಲಿ ಗುರುವಾರ ರಾತ್ರಿ, 10:56ಕ್ಕೆ ಬೆಂಕಿ ತಲೆ ಎತ್ತಿದ್ದು, ಎಲ್‌ಪಿಜಿ ಸಿಲಿಂಡರ್ ಸ್ಫೋಟಗಳು ಬೆಂಕಿಯ ತೀವ್ರತೆಯನ್ನು ಹೆಚ್ಚಿಸಿದವು.

ರಿಥಾಲಾ ಮೆಟ್ರೋ ನಿಲ್ದಾಣ ಮತ್ತು ದೆಹಲಿ ಜಲಬೋರ್ಡ್ ಕಚೇರಿಗಳ ನಡುವೆ ಇರುವ ಬೆಂಗಳೂರು ಬಸ್ತಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯಗಳ ರಾಶಿಯಿಂದ ಬೆಂಕಿ ಆರಂಭವಾದಂತೆ ತೋರುತ್ತಿದೆ. ಸುಮಾರು 400ರಿಂದ 500 ಗುಡಿಸಲುಗಳು ಬೆಂಕಿಯಲ್ಲಿ ಭಸ್ಮವಾಗಿವೆ ಎಂದು ಸ್ಥಳೀಯರು ಹೇಳುತ್ತಿದ್ದಾರೆ. ಬೆಂಕಿಯ ತೀವ್ರತೆಯನ್ನು 'ಮಧ್ಯಮ' ಎಂದು ವರ್ಗೀಕರಿಸಿ, 29 ಫೈರ್ ಟೆಂಡರ್‌ಗಳನ್ನು ಸ್ಥಳಕ್ಕೆ ರವಾನಿಸಲಾಯಿತು. ಸುಮಾರು 6 ಗಂಟೆಗಳ ಕಠಿಣ ಪ್ರಯತ್ನದ ನಂತರ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ.

ಈ ಘಟನೆಯಲ್ಲಿ ಸತ್ತವರ ವಿವರಗಳು ಇನ್ನೂ ಬಹಿರಂಗವಾಗಿಲ್ಲ, ಆದರೆ ಗಾಯಾಳುಗಳನ್ನು ಸಫ್ದರ್ಜಂಗ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಮಗು ಸೇರಿ ಇಬ್ಬರು ಗಾಯಾಳುಗಳ ಸ್ಥಿತಿ ಕ್ರಿಟಿಕಲ್ ಎಂದು ವೈದ್ಯರು ತಿಳಿಸಿದ್ದಾರೆ. ಎಲ್‌ಪಿಜಿ ಸಿಲಿಂಡರ್ ಸ್ಫೋಟಗಳು ಬೆಂಕಿಯನ್ನು ಹೆಚ್ಚಿಸಿ, ಸುತ್ತಮುತ್ತಲ ಪ್ರದೇಶಗಳಲ್ಲಿ ಭಯವನ್ನು ಹರಡಿದವು.

ದೆಹಲಿ ಫೈರ್ ಸರ್ವೀಸಸ್ ಅಧಿಕಾರಿ ಎಸ್.ಕೆ. ದುವಾ ಅವರು ಹೇಳಿದಂತೆ, "ಬೆಂಕಿ ಬೆಂಗಳೂರು ಬಸ್ತಿಯ ಗುಡಿಸಲುಗಳಲ್ಲಿ ಆರಂಭವಾಗಿದ್ದು, ತಕ್ಷಣ 29 ಫೈರ್ ಟೆಂಡರ್‌ಗಳನ್ನು ರವಾನಿಸಲಾಯಿತು. ಬೆಂಕಿಯನ್ನು ನಿಯಂತ್ರಿಸಲು 6 ಗಂಟೆಗಳು ಬೇಕಾಯಿತು. ಯಾವುದೇ ಹೆಚ್ಚಿನ ಸಾವುಗಳು ದಾಖಲಾಗಿಲ್ಲ." ಸ್ಥಳೀಯ ಪೊಲೀಸ್ ಮತ್ತು ಎನ್‌ಡಿಆರ್‌ಎಫ್ ತಂಡಗಳು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದವು. ದುರ್ಘಟನೆಯಿಂದಾಗಿ ದುಡ್ಡುಬಡ್ಡ ಕುಟುಂಬಗಳು ತಮ್ಮ ಆಸ್ತಿಗಳನ್ನು ಕಳೆದುಕೊಂಡಿದ್ದಾರೆ.

ಈ ಘಟನೆ ದೆಹಲಿಯ ಬಡಾವಣೆಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯಗಳ ಸಂಗ್ರಹ ಮತ್ತು ಎಲ್‌ಪಿಜಿ ಸಿಲಿಂಡರ್ ಬಳಕೆಯ ಸಮಸ್ಯೆಗಳನ್ನು ಮತ್ತೊಮ್ಮೆ ಮುಂದಿಡುತ್ತದೆ. ಅಧಿಕಾರಿಗಳು ತನಿಖೆಗೆ ಆದೇಶ ನೀಡಿದ್ದು, ಭವಿಷ್ಯದಲ್ಲಿ ಇಂತಹ ಅವಘಡಗಳನ್ನು ತಡೆಯಲು ತೀವ್ರ ಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ. ಸ್ಥಳೀಯರು ಈ ಪ್ರದೇಶದಲ್ಲಿ ತ್ಯಾಜ್ಯ ನಿರ್ವಹಣೆಯ ಕೊರತೆಯನ್ನು ಆರೋಪಿಸುತ್ತಿದ್ದಾರೆ.

## ಮಾಟಮಂತ್ರ ಶಂಕೆ, ತಾಯಿಯನ್ನೇ ಕೊಂದು ಹೊಲದಲ್ಲಿ ಹೂತುಹಾಕಿದ ಮಗ

**ಭೋಪಾಲ್:** ಮಾಟಮಂತ್ರ ಶಂಕೆಯಿಂದ ವ್ಯಕ್ತಿಯೊಬ್ಬ ತಾಯಿಯನ್ನೇ ಕೊಲೆ ಮಾಡಿ, ಹೊಲದಲ್ಲಿ ಹೂತು ಹಾಕಿರುವ ಘಟನೆ ಮಧ್ಯಪ್ರದೇಶದ ಶಹದೋಲ್ ಜಿಲ್ಲೆಯಲ್ಲಿ ನಡೆದಿದೆ. ತಾಯಿ ಮಾಟ ಮಂತ್ರ ಮಾಡುತ್ತಿದ್ದಾಳೆಂದು ಸಾಕಷ್ಟು ದಿನದಿಂದ ಅನುಮಾನಪಟ್ಟಿದ್ದ ಮಗ ಆಕೆಯನ್ನು ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಈ ಘಟನೆ ಸ್ಥಳೀಯ ಸಮುದಾಯವನ್ನು ಬೆಚ್ಚಿಬೀಳಿಸಿದ್ದು, ಗ್ರಾಮೀಣ ಭಾರತದಲ್ಲಿ ಆಳವಾಗಿ ಬೇರೂರಿರುವ ಮೂಢನಂಬಿಕೆಯ ಸಮಸ್ಯೆಯ ಬಗ್ಗೆ ಮತ್ತೊಮ್ಮೆ ಕಳವಳ ವ್ಯಕ್ತಪಡಿಸಿದೆ.

ಛತ್ತೀಸ್‌ಗಢ ಗಡಿಯ ಸಮೀಪದಲ್ಲಿರುವ ಶಹದೋಲ್ ಜಿಲ್ಲೆಯ ಝಿಕ್‌ಬಿಜುರಿ ಪೊಲೀಸ್ ಹೊರಠಾಣೆ ವ್ಯಾಪ್ತಿಯ ಕುಟೇಲಾ ಗ್ರಾಮದಲ್ಲಿ ಈ ಆಘಾತಕಾರಿ ಘಟನೆ ನಡೆದಿದೆ. ಪೊಲೀಸರ ಪ್ರಕಾರ, 25 ವರ್ಷದ ಸತ್ಯೇಂದ್ರ ಸಿಂಗ್ ತನ್ನ ಚಿಕ್ಕಪ್ಪನ ಸಾವಿಗೆ ಮತ್ತು ಕುಟುಂಬದ ಮಕ್ಕಳ ಅನಾರೋಗ್ಯಕ್ಕೆ ತನ್ನ ತಾಯಿ ಪ್ರೇಮಬಾಯಿ ಕಾರಣ ಎಂದು ಶಂಕಿಸಿದ್ದ.



ಕೋಪದಿಂದ, ಸತ್ಯೇಂದ್ರ ತನ್ನ ಸೋದರಸಂಬಂಧಿ ಓಂಪ್ರಕಾಶ್ ಜೊತೆಗೂಡಿ ತನ್ನ ತಾಯಿಯ ಮೇಲೆ ಕೊಡಲಿ ಮತ್ತು ಕೋಲುಗಳಿಂದ ಹಲ್ಲೆ ಮಾಡಿದ್ದಾನೆ. ಆಕೆಯು ಪರಿ ಪರಿಯಾಗಿ ಬೇಡಿಕೊಂಡರೂ, ಆಕೆ ಸಾಯುವವರೆಗೂ ಅವನು ನಿರ್ದಯವಾಗಿ ಅವಳನ್ನು ಹೊಡೆಯುತ್ತಲೇ ಇದ್ದರು. ಆಕೆಯ ಉಸಿರಾಟ ನಿಂತಾಗ, ಆಕೆಯ ಸಾವನ್ನು ಖಚಿತಪಡಿಸಲು ಆಕೆಯ ಕತ್ತು ಹಿಸುಕಿದ್ದಾನೆ.


ಕೊಲೆಯ ನಂತರ, ಸತ್ಯೇಂದ್ರ ತನ್ನ ಸೋದರಸಂಬಂಧಿ ಮತ್ತು ಇತರ ಕುಟುಂಬ ಸದಸ್ಯರಾದ ಗುಲಾಬ್ ಸಿಂಗ್, ಅಮನ್ ಸಿಂಗ್ ಮತ್ತು ಅಮೋದ್ ಸಿಂಗ್ ಅವರ ಸಹಾಯದಿಂದ ಅಪರಾಧವನ್ನು ಮರೆಮಾಡಲು ಶವವನ್ನು ಹತ್ತಿರದ ಹೊಲದಲ್ಲಿ ಹೂತುಹಾಕಿದ್ದಾನೆ. ಪೊಲೀಸರು ಸುಳಿವು ಪಡೆದು ಸ್ಥಳವನ್ನು ಅಗೆದು ಹೂತಿಟ್ಟ ದೇಹವನ್ನು ವಶಪಡಿಸಿಕೊಂಡಾಗ ಈ ಭೀಕರ ಕೃತ್ಯ ಬೆಳಕಿಗೆ ಬಂದಿತು.

ಆರೋಪಿಗಳು ಸಾಕ್ಷ್ಯ ನಾಶಮಾಡಲು ಶವವನ್ನು ಹೊಲದಲ್ಲಿ ಹೂತು ಹಾಕಿದ್ದಾರೆ. ಶವವನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಎಲ್ಲಾ ಆರೋಪಿಗಳ ವಿರುದ್ಧ ಕೊಲೆ ಪ್ರಕರಣ ದಾಖಲಿಸಲಾಗಿದೆ. ಕೇವಲ ಎರಡು ದಿನಗಳ ಹಿಂದೆ, ಬ್ಯೋಹರಿ ಪ್ರದೇಶದ ಬರ್ಕಾಚ್ ಗ್ರಾಮದಲ್ಲಿ ಇದೇ ರೀತಿಯ ಪ್ರಕರಣ ವರದಿಯಾಗಿತ್ತು, ಅಲ್ಲಿ ಕೂಡ ಮಗನೊಬ್ಬ ವಾಮಾಚಾರದ ಅನುಮಾನದ ಮೇಲೆ ತನ್ನ ತಾಯಿಯನ್ನು ಕೊಂದಿದ್ದ.

## ಕಾರಿನ ಟೈರ್ ಸ್ಫೋಟ, ನಿಯಂತ್ರಣ ತಪ್ಪಿ ಜನರ ಮೇಲೆ ಹರಿದು ಕಾರು, ಮೂವರು ಸಾವು

**ಆಂಧ್ರಪ್ರದೇಶ:** ಕಾರಿನ ಟೈರ್ ಸ್ಫೋಟಗೊಂಡ ಪರಿಣಾಮ ನಿಯಂತ್ರಣ ತಪ್ಪಿ ಜನರ ಮೇಲೆ ಹರಿದ ಪರಿಣಾಮ ಮೂವರು ಸಾವನ್ನಪ್ಪಿರುವ ಘಟನೆ ಆಂಧ್ರಪ್ರದೇಶದ ಜಗ್ಗಂಪೇಟ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ಪೊಲೀಸರ ಪ್ರಕಾರ, ಅಣ್ಣಾವರಂನಿಂದ ಜಗ್ಗಂಪೇಟೆಗೆ ಹೋಗುತ್ತಿದ್ದ ಕಾರಿನ ಟೈರ್ ಸ್ಫೋಟಗೊಂಡು ಚಾಲಕನ ನಿಯಂತ್ರಣ ತಪ್ಪಿ ಅಪಘಾತ(Accident) ಸಂಭವಿಸಿದೆ. ವಾಹನವು ಬೈಕ್ ಮತ್ತು ಆಟೋರಿಕ್ಷಾಗೆ ಡಿಕ್ಕಿ ಹೊಡೆದು ಬಸ್ ನಿಲ್ದಾಣಕ್ಕೆ ನುಗ್ಗಿ ಹಲವಾರು ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಅಪಘಾತದಲ್ಲಿ ಸಾವನ್ನಪ್ಪಿದವರನ್ನು ಮೋರ್ತಾ ಆನಂದರಾವ್,




ಮೋರ್ತಾ ಕೊಂಡಯ್ಯ ಮತ್ತು ಕಾಕಡ ರಾಜು ಎಂದು ಗುರುತಿಸಲಾಗಿದ್ದು, ಎಲ್ಲರೂ ಸೋಮನಾಡ ಗ್ರಾಮದ ನಿವಾಸಿಗಳು. ಗಾಯಾಳುಗಳನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ಸಾಗಿಸಲಾಯಿತು. ಸ್ಥಳೀಯ ಶಾಸಕ ಜ್ಯೋತುಲಾ ನೆಹರು ಅಪಘಾತ ಸ್ಥಳಕ್ಕೆ ಭೇಟಿ ನೀಡಿ, ಬಲಿಪಶುಗಳ ಕುಟುಂಬಗಳನ್ನು ಭೇಟಿ ಮಾಡಿ, ಅವರಿಗೆ ಬೆಂಬಲ ನೀಡುವ ಭರವಸೆ ನೀಡಿದರು.

ಇದರ ನಡುವೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪಘಾತಕ್ಕೆ ನಿಖರವಾದ ಕಾರಣವನ್ನು ಕಂಡುಹಿಡಿಯಲು ತನಿಖೆ ಆರಂಭಿಸಿದ್ದಾರೆ. ಶಾಸಕ ಜ್ಯೋತುಲ ಸ್ಥಳಕ್ಕೆ ಧಾವಿಸಿ ಗಾಯಾಳುಗಳನ್ನು ಆಸ್ಪತ್ರೆಗೆ ಕಳುಹಿಸಿದ್ದಾರೆ, ವೈದ್ಯರು ಅವರಿಗೆ ಚಿಕಿತ್ಸೆ ನೀಡುತ್ತಿದ್ದಾರೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮೂವರು ಮಕ್ಕಳ ತಾಯಿಯ ಸಲಿಂಗ ಕಾಮದಾಹಕ್ಕೆ 5 ತಿಂಗಳ ಶಿಶು ಬಲಿ



**ಆನೇಕಲ್**: ಮೂವರು ಮಕ್ಕಳ ತಾಯಿಯೊಬ್ಬಳ ಸಲಿಂಗ ಕಾಮದ ಹುಚ್ಚು ಪುಟ್ಟ ಕಂದಮ್ಮ ನನ್ನೇ ಕೊಲೆ ಮಾಡುವ ಮಟ್ಟಕ್ಕೆ ಹೋಗಿದೆ. ಯುವತಿಯೊಂದಿಗಿನ ಸಲಿಂಗ ಕಾಮಕ್ಕೆ ಅಡ್ಡಿಯಾಗುತ್ತದೆಂದು 5 ತಿಂಗಳ ಕಂದಮ್ಮನನ್ನು ತಾಯಿಯೇ ಕೊಲೆ ಮಾಡಿದ ದಾರುಣ ಘಟನೆ ಕರ್ನಾಟಕ ಗಡಿ ಭಾಗ ಅನೇಕಲ್ ಸಮೀಪ ತಮಿಳುನಾಡಿನ ಕೆಳಮಂಗಲಂ ಸಮೀಪದ ಚಿನ್ನಟ್ಟಿಯಲ್ಲಿ ನಡೆದಿದೆ. ಸದ್ಯ ಆರೋಪಿಗಳಾದ ಭಾರತಿ (26) ಎಂಬ ವಿವಾಹಿತೆ ಹಾಗೂ ಸುಮಿತ್ರಾ (22) ಎಂಬ ಯುವತಿಯನ್ನು ಕೆಳಮಂಗಲಂ ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ.

**ಗಂಡನಿಲ್ಲದಾಗ ಚಕ್ಕಂದ ಆಡ್ತಿದ್ದ ಭಾರತಿ**

ಚಿನ್ನಟ್ಟಿಯ ಸುರೇಶ್ ಮತ್ತು ಭಾರತಿ ಎಂಬುವವರಿಗೆ ಮದುವೆಯಾಗಿ ಐದು ವರ್ಷವಾಗಿದೆ. ಈ ದಂಪತಿಗೆ ಇಬ್ಬರು ಹೆಣ್ಣು ಮಕ್ಕಳು, ಒಂದು ಗಂಡು ಮಗುವಿದೆ. ಅದೇ ಏರಿಯಾದ ಯುವತಿ ಸುಮಿತ್ರಾ ಎಂಬಾಕೆಯ ಜೊತೆಗೆ ಭಾರತಿ ಸ್ನೇಹ ಬೆಳೆಸಿದ್ದಳು. ಸ್ನೇಹ ಸಲಿಂಗ ಕಾಮಕ್ಕೆ ತಿರುಗಿತ್ತು. ಪತಿ ಇಲ್ಲದೆ ಇದ್ದಾಗ ಭಾರತಿ ಮನೆಯಲ್ಲಿ ಇಬ್ಬರೂ ಸೇರಿಕೊಳ್ಳುತ್ತಿದ್ದರು. ಕಳೆದ ನಾಲ್ಕು ವರ್ಷಗಳಿಂದ ಭಾರತಿ- ಸುಮಿತ್ರಾ ಸಲಿಂಗ ಕಾಮಿಗಳಾಗಿದ್ದರು.

**ಬೆತ್ತಲೆ ವಿಡಿಯೋ ಕಾಲ್, ಖಾಸಗಿ ಫೋಟೊ ಶೇರ್ ಮಾಡಲು ಬೇರೆಯದೇ ಮೊಬೈಲ್!**



ಇಬ್ಬರೂ ಪರಸ್ಪರ ಮಾತನಾಡಿಕೊಳ್ಳುವುದಕ್ಕೆ , ನಗ್ನ ವಿಡಿಯೋ ಕಾಲ್ ಮಾಡಲು ಮತ್ತು ಖಾಸಗಿ ಫೋಟೊ ಗಳನ್ನು ಹಂಚಿಕೊಳ್ಳುವುದಕ್ಕೆಂದೇ ಬೇರೆಯದೇ ಮೊಬೈಲ್ ಕೂಡ ಇಟ್ಟುಕೊಂಡಿದ್ದರು. ಸ್ನಾನ ಮಾಡುವಾಗ ನಗ್ನವಾಗಿ ವಿಡಿಯೋ ಕಾಲ್ ಮಾಡುವುದು, ಇಬ್ಬರೂ ಕಿಸ್ ಮಾಡುತ್ತಾ ಫೋಟೋ ಕ್ಲಿಕ್ಲಿಸಿಕೊಳ್ಳುತ್ತಿದ್ದರು. ಭಾರತಿ ತನ್ನ ಎದೆ ಮೇಲೆ 'sumi' ಎಂದು ಟ್ಯಾಟೂ ಕೂಡ ಹಾಕಿಸಿಕೊಂಡಿದ್ದಳು. ಇಬ್ಬರೂ ಪರಸ್ಪರ ಚಾಕುವಿನಿಂದ ಕೈಕೊಯ್ದುಕೊಂಡಿದ್ದರು. ಅಲ್ಲದೆ, ಫೋಟೋಗಳನ್ನು ಹಾಕಿ ರೀಲ್ಸ್ ವಿಡಿಯೋ ಕೂಡ ಮಾಡಿದ್ದರು.

**5 ತಿಂಗಳ ಹಿಂದೆ ಗಂಡುಮಗುವಿಗೆ ಜನ್ಮ ನೀಡಿದ್ದ ಭಾರತಿ: ಇದೇ ವಿಚಾರಕ್ಕೆ ಜಗಳ**


ಐದು ತಿಂಗಳ ಹಿಂದೆಯಷ್ಟೇ ಭಾರತಿ ಗಂಡು ಮಗುವಿಗೆ ಜನ್ಮ ನೀಡಿದ್ದಳು. ಮಗು ಆದಾಗಿನಿಂದ ಭಾರತಿ ತನ್ನನ್ನು ದೂರು ಮಾಡುತ್ತಿದ್ದಾಳೆ ಎಂದು ಭಾವಿಸಿದ್ದ ಸುಮಿತ್ರಾ ತಗಾದೆ ತೆಗೆದಿದ್ದಳು. ಈ ವಿಚಾರದಲ್ಲಿ ಇಬ್ಬರ ಮಧ್ಯೆ ಪದೇ ಪದೇ ಜಗಳವಾಗಿ ಕಿತ್ತಾಡುತ್ತಿದ್ದರು. ಮಗುವಿನಿಂದಾಗಿಯೇ ಈ ಗಲಾಟೆಯಾಗುತ್ತಿದ್ದು , ಮಗುವನ್ನು ಕೊಲೆ ಮಾಡು ಎಂದು ಭಾರತಿಗೆ ಸುಮಿತ್ರಾ ತಿಳಿಸಿದ್ದಳು. ಅದರಂತೆ, ಭಾರತಿ ತನ್ನ ಮಗುವನ್ನು ಉಸಿರುಗಟ್ಟಿಸಿ ಕೊಲೆ ಮಾಡಿದ್ದಳು.

**ಹಾಲು ಗಂಟಲಲ್ಲಿ ಸಿಕ್ಕಿ ಮಗು ಉಸಿರುಗಟ್ಟಿ ಸಾವನ್ನಪ್ಪಿದೆ ಎಂದು ಕಥೆಕಟ್ಟಿದ್ದ ಭಾರತಿ**

ಮಗು ಹಾಲು ಕುಡಿಯುವಾಗ ಗಂಟಲಲ್ಲಿ ಸಿಕ್ಕಿ ನೆತ್ತಿಗೇರಿ ಸಾವನ್ನಪ್ಪಿದೆ ಎಂದು ಭಾರತಿ ಕಥೆಕಟ್ಟಿದ್ದಳು. ನಂತರ ಕುಟುಂಬಸ್ಥರು ಮಗುವಿನ ಅಂತ್ಯಸಂಸ್ಕಾರ ಮಾಡಿ ಮುಗಿಸಿದ್ದರು. ಇದಾದ ನಂತರ ಭಾರತಿ ಮತ್ತು ಸುಮಿತ್ರಾ ಬಳಸುತ್ತಿದ್ದ ಮೊಬೈಲ್ ಆಕೆಯ ಪತಿ ಸುರೇಶ್‌ಗೆ ಸಿಕ್ಕಿತ್ತು. ಅದರಿಂದಾಗಿ ಇಬ್ಬರ ಸಲಿಂಗ ಕಾಮದ ವಿಷಯ ಮತ್ತು ಮಗುವಿನ ಕೊಲೆ ರಹಸ್ಯ ಬಯಲಾಯಿತು. ಇದರ ಬೆನ್ನಲ್ಲೇ, ಪೊಲೀಸರಿಗೆ ದೂರು ನೀಡುವುದಾಗಿ ಹೇಳಿ ಸುರೇಶ್ ಮನೆಯಿಂದ ತೆರಳಿದ್ದರು. ಈ ವೇಳೆ ಫೋನ್ ಮಾಡಿದ ಭಾರತಿ, ಮಗುವನ್ನು ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾಳೆ.

ಈ ಎಲ್ಲ ಘಟನೆಯ ನಂತರ, ಮೊಬೈಲ್‌ನಲ್ಲಿ ಸಿಕ್ಕಿದ ಆಡಿಯೋ, ವಿಡಿಯೋ, ಫೋಟೋಗಳ ಸಮೇತವಾಗಿ ಸುರೇಶ್ ಪೊಲೀಸರಿಗೆ ದೂರು ನೀಡಿದ್ದಾರೆ. ಸದ್ಯ ಕೆಳಮಂಗಲಂ ಪೊಲೀಸ್ ಠಾಣೆಯಲ್ಲಿ ಭಾರತಿ ಮತ್ತು ಸುಮಿತ್ರಾ ವಿರುದ್ಧ ಪ್ರಕರಣ ದಾಖಲಾಗಿದೆ. ಕೆಳಮಂಗಲಂ ತಹಶೀಲ್ದಾರ್ ಗಂಗೈ ರವರ ಸಮ್ಮುಖದಲ್ಲಿ ಮಗುವಿನ ಶವವನ್ನು ಮತ್ತೆ ಹೊರ ತೆಗೆದುಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಭಾರತಿ ಮತ್ತು ಸುಮಿತ್ರಾಳನ್ನು ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ.

# ಹಗಲಲ್ಲಿ ಕುರಾನ್ ಬೋಧಕ; ರಾತ್ರಿ ಮನೆಗಳಿಗೆ ಕನ್ನ, ಶಿಕ್ಷಕ ಅರೆಸ್ಟ್



**ಕಲಬುರಗಿ:** ಆತ ಮಸೀದಿಯೊಂ ದರಲ್ಲಿ ಕುರಾನ್ (Quran) ಬೋಧನೆ ಮಾಡುವ ಶಿಕ್ಷಕರಾಗಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದ. ಆದರೆ ಮಾಡಿದ ಸಾಲವನ್ನ ತೀರಿಸಲಾಗದಕ್ಕೆ ಹುಡುಕಿಕೊಂಡಿದ್ದು ಕಳ್ಳತನದ ಮಾರ್ಗ. ಮಸೀದಿಯಲ್ಲಿ ಕುರಾನ್ ಬೋಧನೆ ಮಾಡುತ್ತಾ ಅತ್ತ ಮನೆಗಳಿಗೂ ಕನ್ನ ಹಾಕುತ್ತಿದ್ದ ಖದೀಮನನ್ನು ಕಲಬುರಗಿ ಸಿಟಿ ಪೊಲೀಸರು ಬಲೆಗೆ ಕೆಡವಿದ್ದಾರೆ. ಅಷ್ಟಕ್ಕೂ ಇತನ ಕಳ್ಳತನ ದಂಧೆ ಹೇಗಿತ್ತು ಅಂತಾ ತಿಳಿಯಲು ಮುಂದೆ ಓದಿ.

**ಮಹ್ಮದ್ ಆರೀಫ್ ಅಲಿ ಬಂಧಿತ ಶಿಕ್ಷಕ.**

ವಿಶ್ವವಿದ್ಯಾಲಯ ಠಾಣಾ ಪೊಲೀಸರು ಬಂಧಿತನಿಂದ 100 ಗ್ರಾಂ ಚಿನ್ನಾಭರಣ, 16 ಸಾವಿರ ರೂ ಮೌಲ್ಯದ ಬೆಳ್ಳಿ, ಬೈಕ್ ಸೇರಿದಂತೆ 13.41 ಲಕ್ಷ ರೂ ಮೌಲ್ಯದ ವಸ್ತುಗಳನ್ನ ಜಪ್ತಿ ಮಾಡಿದ್ದಾರೆ.

**ಶಿಕ್ಷಕ ವೃತ್ತಿ ಬಿಟ್ಟು ಕಳ್ಳತನಕ್ಕೆ ಇಳಿದ ವ್ಯಕ್ತಿ**

ಕಲಬುರಗಿ ನಗರದ ಬಿಲಾಲಬಾದ್ ಕಾಲೋನಿಯ ನಿವಾಸಿ ಮಹ್ಮದ್ ಆರೀಫ್ ಅಲಿ ಮಸೀದಿಯೊಂದರಲ್ಲಿ ಕುರಾನ್ ಬೋಧಿಸುವ ಶಿಕ್ಷಕನಾಗಿ ಕೆಲಸ ಮಾಡುತ್ತಿದ್ದರು. ತಾವಾಯಿತು ತಮ್ಮ ಕೆಲಸವಾಯಿತು ಅಂತಾ ಇದ್ದಿದ್ದರೆ ಇಂದು ಕಲಬುರಗಿ ಪೊಲೀಸರ ಅತಿಥಿಯಾಗುತ್ತಿರಲಿಲ್ಲ.



ಆದರೆ ತಮ್ಮ ಶಿಕ್ಷಕ ವೃತ್ತಿ ಬಿಟ್ಟು ಕಳೆದ ಏಳೆಂಟು ತಿಂಗಳಿನಿಂದ ಕಳ್ಳತನ ವೃತ್ತಿಗೆ ಇಳಿದಿದ್ದರು. ಅದರಂತೆ ಬೆಳಗ್ಗೆ ಮಸೀದಿಯಲ್ಲಿ ಕುರಾನ್ ಬೋಧಿಸಿ ಮಧ್ಯಾಹ್ನ ಮತ್ತು ಸಂಜೆ ಕೆಲಸದ ಬಿಡುವಿನ ವೇಳೆ ನಗರದ ತಮ್ಮ ಬಡಾವಣೆಗಳಲ್ಲಿ ಬೈಕ್ ಮೇಲೆ ಸುತ್ತಾಡ ಬೀಗ ಹಾಕಿರುವ ಮನೆಗಳನ್ನು ವಾಚ್ ಮಾಡುತ್ತಿದ್ದರು. ನಸುಕಿನ ಜಾವ 3 ಗಂಟೆ ಬಳಿಕ ಜನ ಗಾಢ ನಿದ್ರೆಯಲ್ಲಿದ್ದಾಗ ಕಬ್ಬಿಣದ ರಾಡ್‌ನಿಂದ ಮನೆ ಬೀಗ ಒಡೆದು ಕನ್ನ ಹಾಕುತ್ತಿದ್ದರು.

**ಮನೆಗಳಿಗೆ ಕನ್ನ**

ಇನ್ನು ಬಂಧಿತ ಕುಖ್ಯಾತ ಮನೆಗಳ್ಳ ಮಹ್ಮದ್ ಆರೀಫ್ ಅಲಿ ಕಳೆದ ಅನೇಕ ವರ್ಷಗಳಿಂದ ಮಸೀದಿಯೊಂದರಲ್ಲಿ ಕುರಾನ್ ಬೋಧನೆ ವೃತ್ತಿಯಲ್ಲಿ ಇದ್ದರು. ಆದರೆ ಇತ್ತೀಚಿಗೆ ಮಹ್ಮದ್ ಆರೀಫ್ ಅಲಿಗೆ ಸಾಲಬಾಧೆ ಮತ್ತು ಕೌಟುಂಬಿಕ ಹಣಕಾಸು ತೊಂದರೆಯಿಂದ ಸಿಕ್ಕಾಪಟೆ ಬಳಲುತ್ತಿದ್ದರು. ಹಾಗಾಗಿ ಬರುತ್ತಿದ್ದ 10ರಿಂದ 12 ಸಾವಿರ ರೂ. ಸಂಬಳದಲ್ಲಿ ಕುಟುಂಬ ನಿರ್ವಹಣೆ ಮಾಡಲು ಸಾಧ್ಯವಾಗದ ಹಿನ್ನೆಲೆ ಮನೆಗಳಿಗೆ ಕನ್ನ ಹಾಕುವ ಕೆಲಸಕ್ಕೆ ಕೈಹಾಕಿದ್ದರು.

ವಿಶ್ವವಿದ್ಯಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹೆಚ್ಚು ಮುಸ್ಲಿಮರು ವಾಸಿಸುವ ಬಡಾವಣೆಗಳಿರೋ ಕಾರಣ, ತಾಜ್ ನಗರ, ರಾಜಪುರ ರೋಡ್ ಸೇರಿದಂತೆ ಅನೇಕ ಕಡೆಗಳಲ್ಲಿ ಮಧ್ಯಾಹ್ನ ಮತ್ತು ಸಂಜೆ ವೇಳೆ ಯಾವ ಮನೆಗಳಿಗೆ ಬೀಗ ಹಾಕಲಾಗಿದೆ ಎಂದು ಗಮನಿಸುತ್ತಿದ್ದರು. ಬಳಿಕ ನಸುಕಿನ ಜಾವ ಬಂದು ಕನ್ನ ಹಾಕುತ್ತಿದ್ದರು.

ವಿವಿ ಠಾಣಾ ವ್ಯಾಪ್ತಿಯಲ್ಲಿ ನಿರಂತರ ಮನೆಗಳ ಕಳ್ಳತನ ಪೊಲೀಸರಿಗೆ ದೊಡ್ಡ ತಲೆನೋವಾಗಿತ್ತು. ಪ್ರಕರಣದ ತನಿಖೆಗಿಳಿದ ಖಾಕಿ ಪಡೆ ಬಡಾವಣೆಗಳಲ್ಲಿನ ಸಿಸಿ ಟಿವಿ ದೃಶ್ಯಗಳನ್ನ ಸಂಗ್ರಹಿಸಿದಾಗ ಸಿಕ್ಕಿದ್ದೆ ಈ ಅನುಮಾನಸ್ಪದ ವ್ಯಕ್ತಿ. ಅದರಂತೆ ಮಸೀದಿಯಲ್ಲಿ ಕುರಾನ್ ಪಠಣ ಮಾಡುತ್ತಿದ್ದ ಮಹ್ಮದ್ ಆರೀಫ್ ಅಲಿಯನ್ನ ವಶಕ್ಕೆ ಪಡೆದು ವಿಚಾರಣೆ ವೇಳೆ ಶಿಕ್ಷಕನ ಅಸಲಿ ಬಣ್ಣ ಬಯಲಾಗಿದೆ.

ಸದ್ಯ ವಿಶ್ವವಿದ್ಯಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮನೆಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಖದೀಮನನ್ನು ಕೊನೆಗೂ ಲಾಕ್ ಮಾಡಲಾಗಿದ್ದು , ವಿವಿ ಠಾಣೆ ಪೊಲೀಸರ ಕಾರ್ಯಾಚರಣೆಗೆ ಕಲಬುರಗಿ ನಗರ ಪೊಲೀಸ್ ಇಲಾಖೆ ಪ್ರಶಂಸನೀಯ ಪತ್ರ ನೀಡಿ ಸತ್ಕರಿಸಿದೆ.

# ಸರ್ಕಾರ ನಿಗದಿಪಡಿಸಿದ್ದಕ್ಕಿಂತ 50 ರೂ. ಜಾಸ್ತಿ ಕೊಡ್ತೀವಿ: ವೆಂಕಟೇಶ್ವರ ಸಕ್ಕರೆ ಕಾರ್ಖಾನೆ



**ಚಿಕ್ಕೋಡಿ**: ಕಬ್ಬು ಬೆಳೆಯುವ ರೈತರಿಗೆ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಬೆಡಕಿಹಾಳ ಗ್ರಾಮದಲ್ಲಿರುವ ವೆಂಕಟೇಶ್ವರ ಸಕ್ಕರೆ ಕಾರ್ಖಾನೆ ಸಿಹಿ ಸುದ್ದಿ ನೀಡಿದೆ. ಒಂದು ಟನ್ ಕಬ್ಬಿಗೆ 3,350 ರೂ. ನೀಡುವುದಾಗಿ ಕಾರ್ಖಾನೆ ಹೇಳಿದೆ.

ವೆಂಕಟೇಶ್ವರ ಸಕ್ಕರೆ ಕಾರ್ಖಾನೆ ಸ್ವರೂಪ ಮಹಾದೇವರಾವ್ ಮಹಾಡಿಕ್ ಎಂಬವರ ಒಡೆತನದಲ್ಲಿದೆ. ಒಂದು ಟನ್ ಕಬ್ಬಿಗೆ 3,300 ರೂ. ನೀಡಬೇಕು ಎಂದು ರಾಜ್ಯ ಸರ್ಕಾರ ನಿಗದಿ ಮಾಡಿತ್ತು. ಇದೀಗ ಸರ್ಕಾರ ನಿಗದಿಪಡಿಸಿದ ದರಕ್ಕಿಂತ 50 ರೂ. ಹೆಚ್ಚಿಗೆ ನೀಡಲು ವೆಂಕಟೇಶ್ವರ ಸಕ್ಕರೆ ಕಾರ್ಖಾನೆ ಒಪ್ಪಿಗೆ ನೀಡಿದೆ.

ಈ ಮೊದಲು ಕಬ್ಬು ಬೆಳೆಗಾರರಿಗೆ 50 ರೂ. ಹೆಚ್ಚು ಹಣವನ್ನು ಕಾರ್ಖಾನೆ ಮಾಲೀಕರು ಕೊಡಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಮಾಲೀಕರ ಎದುರೇ ಇದನ್ನ ನಿರ್ಧಾರ ಮಾಡಿದ್ದೇವೆ. ಹೇಳಿರೋದೊಂದು ಮಾಡಿರೋದೊಂದು ಅಲ್ಲ. ಮಾಲೀಕರ ಎದುರಿಗೆ ಎಲ್ಲವನ್ನು ಹೇಳಿದ್ದೇನೆ. ಜೂಮ್ ಮೀಟಿಂಗ್‌ನಲ್ಲಿ ಡಿಸಿ ಬಂದು ಹೇಳೋವರೆಗೂ 3,200 ರೂ.ಗೆ ಒಪ್ಪಿರಲಿಲ್ಲ. ಡಿಸಿ ಹೇಳಿದ ಮೇಲೆ ಒಪ್ಪಿಕೊಂಡರು. ನಾನು ಬಹಳ ಸ್ಪಷ್ಟವಾಗಿ ಹೇಳಿದ್ದೇನೆ. 50 ರೂ. ಕಾರ್ಖಾನೆಗಳು ಕೊಡಬೇಕು. ಸರ್ಕಾರ 50 ರೂ. ಕೊಡಲಿದೆ. 10.25% ರಿಕವರಿಗೆ 3,100+100 ಸೇರಿ 3200 ರೂ., 11.25% ರಿಕವರಿಗೆ 3,200+100 ಸೇರಿ 3,300 ರೂ. ಕೊಡಬೇಕು ಎಂದು ನಿರ್ಧಾರ ಆಗಿದೆ ಎಂದಿದ್ದರು. ಈ ನಿರ್ಣಯವನ್ನು ಸರ್ಕಾರ ಇದೀಗ ಅಧಿಕೃತಗೊಳಿಸಿದೆ.

# ನಮಗೆ ಕಟ್ಟಾ ಸರ್ಕಾರ ಬೇಡ, ಮತ್ತೊಮ್ಮೆ ಎನ್‌ಡಿಎ ಸರ್ಕಾರ ಬೇಕು: ಮೋದಿ



**ಪಾಟ್ನಾ**: ಮೊದಲ ಹಂತದ ಮತದಾನವು ಜಂಗಲ್ ರಾಜ್ ಅನ್ನು ಅನುಸರಿಸುವವರಿಗೆ 65 ವೋಲ್ಟ್ ಆ ಘಾ ತ ವ ನ್ನು ನೀಡಿದೆ. ನಿಮ್ಮ ಪ್ರೀತಿ ಮತ್ತು ಉತ್ಸಾಹ ವನ್ನು ನೋಡಿದರೆ, ಈ ಬಾರಿ ಎನ್‌ಡಿಎ ಸರ್ಕಾರ ಮತ್ತೆ ರಚನೆಯಾಗುವುದು ಸ್ಪಷ್ಟವಾಗಿದೆ. ನಿಮ್ಮ ಆಶೀರ್ವಾದವೇ ದೊಡ್ಡ ಶಕ್ತಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಬಿಹಾರ ವಿಧಾನಸಭೆ ಚುನಾವಣೆ ಹಿನ್ನೆಲೆ ಇಂದು ಪ್ರಧಾನಿ ನರೇಂದ್ರ ಮೋದಿ ಸೀತಾಮರ್ಹಿ ಮತ್ತು ಬೆಟ್ಟಿಯಾದಲ್ಲಿ ಸಾರ್ವಜನಿಕ ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಸೀತಾಮರ್ಹಿಯಲ್ಲಿ ಮಾತನಾಡಿದ ಅವರು, ನಮಗೆ ಕಟ್ಟಾ ಸರ್ಕಾರ ಬೇಡ, ಮತ್ತೊಮ್ಮೆ ಎನ್‌ಡಿಎ ಸರ್ಕಾರ ಬೇಕು ಎಂದು ಘೋಷಣೆ ನೀಡಿದರು.

ಈ ಚುನಾವಣೆ ಬಿಹಾರವನ್ನು ಅಭಿವೃದ್ಧಿಪಡಿಸುವುದಾಗಿದೆ. ಈ ಚುನಾವಣೆ ನಿಮ್ಮ ಭವಿಷ್ಯದ ಪೀಳಿಗೆಯ ಭವಿಷ್ಯವನ್ನು ನಿರ್ಧರಿಸುತ್ತದೆ. ಆದ್ದರಿಂದ ಈ ಚುನಾವಣೆ ನಿರ್ಣಾಯಕವಾಗಿದೆ. ಆದ್ದರಿಂದ, ನೀವು ಹಿಂದಿನ ಎಲ್ಲಾ ಮತದಾನ ದಾಖಲೆಗಳನ್ನು ಮುರಿಯಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಮತ ಚಲಾಯಿಸಿ ಮತ್ತು ನಮ್ಮ ಅಭ್ಯರ್ಥಿಗಳಿಗೆ ನಿಮ್ಮ ಆಶೀರ್ವಾದವನ್ನು ನೀಡಬೇಕು ಎಂದು ಮನವಿ ಮಾಡಿದರು.

ಬಿಹಾರದ ಮಕ್ಕಳು ಇನ್ನು ಮುಂದೆ ದರೋಡೆಕೋರರಾಗುವುದಿಲ್ಲ ಬದಲಾಗಿ ವೈದ್ಯ, ಎಂಜಿನಿಯರ್, ವಕೀಲ, ನ್ಯಾಯಾಧೀಶನಾಗುತ್ತಾನೆ. ಬಿಹಾರದಲ್ಲಿ ಜಂಗಲ್ ರಾಜ್‌ಗೆ ಸ್ಥಾನವಿಲ್ಲ. ಆದರೆ ಆರ್‌ಜೆಡಿ (RJD) ಬಿಹಾರದ ಮಕ್ಕಳಿಗೆ ಬಂದೂಕುಗಳು ಮತ್ತು ಡಬಲ್ ಬ್ಯಾರೆಲ್ ಬಂದೂಕುಗಳನ್ನು ನೀಡುತ್ತಿದೆ. ಅವರು ತಮ್ಮ ಮಕ್ಕಳನ್ನು ಮಂತ್ರಿಗಳನ್ನಾಗಿ ಮಾಡಲು ಬಯಸುತ್ತಾರೆ. ಅವರು ತಮ್ಮ ಮಕ್ಕಳಿಗಾಗಿ ಮಾತ್ರ ಕನಸು ಕಾಣುತ್ತಾರೆ. ಜಂಗಲ್ ರಾಜ್ ಎಂದರೆ ಬಂದೂಕುಗಳು, ಕ್ರೌರ್ಯ, ಕಹಿ, ಕೆಟ್ಟ ಆಡಳಿತ, ಕೆಟ್ಟ ಮೌಲ್ಯಗಳು, ಭ್ರಷ್ಟಾಚಾರ ಎಂದು ಹೇಳಿದರು.

ಬಿಹಾರದಲ್ಲಿ ಜಂಗಲ್ ರಾಜ್ ಬಂದ ತಕ್ಷಣ, ರಾಜ್ಯದಲ್ಲಿ ವಿನಾಶದ ಯುಗ ಪ್ರಾರಂಭವಾಯಿತು. ಆರ್‌ಜೆಡಿ ಬಿಹಾರದಲ್ಲಿ ಅಭಿವೃದ್ಧಿಯ ವಾತಾವರಣವನ್ನು ನಾಶಮಾಡಿತು. ಆರ್‌ಜೆಡಿ ಮತ್ತು ಕಾಂಗ್ರೆಸ್ ಜನರಿಗೆ ಕೈಗಾರಿಕೆಗಳ ಎಬಿಸಿ ಕೂಡ ತಿಳಿದಿಲ್ಲ. ಅವರು ಕೈಗಾರಿಕೆಗಳನ್ನು ಮುಚ್ಚಲು ಮಾತ್ರ ಬಯಸುತ್ತಾರೆ. ಮಿಥಿಲಾದಲ್ಲಿಯೇ ಕಾರ್ಖಾನೆಗಳು ಮುಚ್ಚಲ್ಪಟ್ಟಿವೆ. 15 ವರ್ಷಗಳಲ್ಲಿ ಬಿಹಾರದಲ್ಲಿ ಯಾವುದೇ ದೊಡ್ಡ ಆಸ್ಪತ್ರೆ ಅಥವಾ ಕಾರ್ಖಾನೆಯನ್ನು ನಿರ್ಮಿಸಲಾಗಿಲ್ಲ. ಆದ್ದರಿಂದ, ಜಂಗಲ್ ರಾಜ್ ಜನರ ಬಾಯಿಂದ ಅಭಿವೃದ್ಧಿಯ ಮಾತು ಬರೀ ಸುಳ್ಳು. ಬಿಹಾರದ ಜನರು ಸರ್ಕಾರದ ಮೇಲಿನ ನಂಬಿಕೆಯನ್ನು ಕಳೆದುಕೊಂಡಿದ್ದರು. ನಿತೀಶ್ ಕುಮಾರ್ ಈ ನಂಬಿಕೆಯನ್ನು ಮರಳಿ ತಂದರು. ಬಿಜೆಪಿ ಮತ್ತು ಎನ್‌ಡಿಎ ಸರ್ಕಾರ ತಾನು ಹೇಳಿದ್ದನ್ನು ಮಾಡಿ ತೋರಿಸುತ್ತದೆ ಎಂದರು.

**ಎನ್‌ಡಿಎ 160 ಕ್ಕೂ ಹೆಚ್ಚು ಸ್ಥಾನ; ಅಮಿತ್ ಶಾ ಭವಿಷ್ಯ**

ಬಿಹಾರದ ಅರ್ಧದಷ್ಟು ಜನರು ಈಗಾಗಲೇ ಕಾಂಗ್ರೆಸ್-ಆರ್‌ಜೆಡಿ ಮೈತ್ರಿಕೂಟವನ್ನು ತಿರಸ್ಕರಿಸಿದ್ದಾರೆ ಎನ್‌ಡಿಎ 160 ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವ ಮೂಲಕ ಸರ್ಕಾರ ರಚಿಸಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು. ಪೂರ್ಣಿಯದ ಬನ್ಮಂಖಿಯಲ್ಲಿ ಚುನಾವಣಾ ರ‍್ಯಾಲಿ ನಡೆಸಿದ ಅವರು ಕಾಂಗ್ರೆಸ್, ಆರ್‌ಜೆಡಿ ವಿರುದ್ಧ ವಾಗ್ದಾಳಿ ನಡೆಸಿದರು.

ರಾಹುಲ್ ಗಾಂಧಿ ಮತ್ತು ಲಾಲು ಪ್ರಸಾದ್ ಅವರ ಮಗ ತೇಜಸ್ವಿ ಯಾದವ್ ಒಳನುಸುಳುವವರಿಗೆ ಆದ್ಯತೆ ನೀಡುತ್ತಿದ್ದಾರೆ. ಸೀಮಾಂಚಲವು ಒಳನುಸುಳುವವರಿಗೆ ಕೇಂದ್ರವಾಗಬೇಕೆಂದು ಅವರು ಬಯಸುತ್ತಾರೆ. ಒಳನುಸುಳುವವರು ನಮ್ಮ ಬಡವರ ಹಕ್ಕುಗಳನ್ನು ಕಸಿದುಕೊಳ್ಳುತ್ತಾರೆ. ನಾವು ಒಳನುಸುಳುವವರನ್ನು ಹೊರಹಾಕುವುದಲ್ಲದೆ ಭೂ ಸ್ವಾಧೀನವನ್ನು ರದ್ದುಗೊಳಿಸುತ್ತೇವೆ ಎಂದು ಘೋಷಿಸಿದರು.

**ಪ್ರಧಾನಿ ಮೋದಿಗೆ ಪ್ರಿಯಾಂಕ ತಿರುಗೇಟು:**


ಪ್ರಧಾನಿ ಮೋದಿ ದೇಶದ ಎಲ್ಲಾ ಸಾರ್ವಜನಿಕ ವಲಯದ ಉದ್ಯಮಗಳನ್ನು ತಮ್ಮ ಕೆಲವು ಕಾರ್ಪೊರೇಟ್ ಸ್ನೇಹಿತರಿಗೆ ಹಸ್ತಾಂತರಿಸುತ್ತಿದ್ದಾರೆ. ದೇಶದ ಜನರು ಅದಕ್ಕೆ ಬೆಲೆ ತೆರುತ್ತಿದ್ದಾರೆ ಎಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ಆರೋಪಿಸಿದ್ದಾರೆ. ಬಿಹಾರದ ಕತಿಹಾರ್‌ನಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಅನ್ಯಾಯ ಮತ್ತು ವಿಭಜಕ ನೀತಿಗಳ ವಿರುದ್ಧ ಮಹಾತ್ಮ ಗಾಂಧಿ ಒಮ್ಮೆ ನಡೆಸಿದ ಹೋರಾಟದಂತೆಯೇ ಕಾಂಗ್ರೆಸ್ ಪಕ್ಷವು ಇಂದು ನಡೆಸುತ್ತಿದೆ ಎಂದು ಹೇಳಿದರು.

ಪ್ರಧಾನಿ ಮೋದಿ ಭಾಷಣಕ್ಕೆ ಪ್ರತಿಕ್ರಿಯಿಸಿದ ಪ್ರಿಯಾಂಕಾ ಗಾಂಧಿ, ಪ್ರಧಾನಿ ಮೋದಿ ತಮ್ಮ ಹುದ್ದೆಯ ಘನತೆಯನ್ನು ಎತ್ತಿಹಿಡಿಯುವಲ್ಲಿ ವಿಫಲರಾಗಿದ್ದಾರೆ. ಜನರನ್ನು ಕೆರಳಿಸಲು 'ಕಟ್ಟಾ' ನಂತಹ ಪದಗಳನ್ನು ಬಳಸುತ್ತಿದ್ದಾರೆ. ದೇಶದ ಅತ್ಯುನ್ನತ ಹುದ್ದೆಯನ್ನು ಹೊಂದಿರುವ ವ್ಯಕ್ತಿ ಸಂಯಮ ಮತ್ತು ಸಭ್ಯತೆಯನ್ನು ಕಾಪಾಡಿಕೊಳ್ಳಬೇಕು ಎಂದು ಕುಟುಕಿದರು. ಬಿಹಾರದಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಪ್ರಿಯಾಂಕಾ ಗಾಂಧಿ ಸಾರ್ವಜನಿಕರಲ್ಲಿ ಮನವಿ ಮಾಡಿದರು

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

# ಶಾಲಾ ಕಾಲೇಜುಗಳಿಗೆ ಬಾಂಬ್ ಬೆದರಿಕೆ ಕೇಸ್

## ಜ್ಯೋತಿಷಿ ಮಾತು ಕೇಳಿ ಎಡವಟ್ಟು ಮಾಡ್ಕೊಂಡ ಟೆಕ್ಕಿ



**ಬೆಂಗಳೂರು:** ಯುವಕ ಪ್ರೀತಿ ನಿರಾಕರಿ ಸಿದ್ದಕ್ಕೆ ಬೆಂಗಳೂರಿನ ಶಾಲಾ-ಕಾಲೇಜು ಗಳಿಗೆ ಹುಸಿಬಾಂಬ್ ಬೆದರಿಕೆ ಹಾಕಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜ್ಯೋತಿಷಿ ಮಾತು ಕೇಳಿ ಟೆಕ್ಕಿ ಎಡವಟ್ಟು ಮಾಡಿಕೊಂಡಿರುವುದಾಗಿ ತಿಳಿದುಬಂದಿದೆ.

ಪ್ರಿಯಕರನಿಂದ ಪ್ರೇಮ ವಂಚನೆಗೊಳಗಾದ ಸಾಫ್ಟ್‌ವೇರ್ ಎಂಜಿನಿಯರ್ ರೆನಿ ಜೋಶಿಲ್ದಾನ್ನು ಗುರುವಾರ (ನ.7) ಉತ್ತರ ವಿಭಾಗದ ಸೆನ್ ಪೊಲೀಸರು ಬಂಧಿಸಿದ್ದರು.

ಪ್ರೀತಿಯನ್ನು ನಿರಾಕರಿಸಿದ್ದಲ್ಲದೇ, ಆತನಿಗೆ ಬೇರೆ ಮದುವೆ ಕೂಡ ನಿಗದಿಯಾಗಿತ್ತು. ಇದರಿಂದ ಕೋಪಗೊಂಡಿದ್ದ ಟೆಕ್ಕಿ ಆತನಿಗೆ ಪಾಠ ಕಲಿಸಬೇಕೆಂದು ಜ್ಯೋತಿಷಿ ಬಳಿ ಹೋಗಿದ್ದಳು. ಆಗ ಜ್ಯೋತಿಷಿ ಮಾತು ಕೇಳಿ ಅವನೊಬ್ಬ ರೇಪಿಸ್ಟ್, ಕ್ಯಾರೆಕ್ಟರ್ ಸರಿಯಿಲ್ಲ ಅಂತ ಇಲ್ಲಸಲ್ಲದ ಆರೋಪ ಹೊರಿಸಲು ಯತ್ನಿಸಿದ್ದಳು. ಆದರೆ ಅದು ವಿಫಲವಾಗಿತ್ತು. ಬಳಿಕ ಮತ್ತೆ ಜ್ಯೋತಿಷಿ ಬಳಿ ಹೋಗಿದ್ದಳು. ಆಗ ಜ್ಯೋತಿಷಿ ಅವನೊಬ್ಬ ಭಯೋತ್ಪಾದಕನಂತೆ ಬಿಂಬಿಸಲು ತಿಳಿಸಿದ್ದರು.

ಜ್ಯೋತಿಷಿ ಮಾತಿನಂತೆ ಯುವಕನ ಇಮೇಲ್ ಐಡಿಯಿಂದ ಬೆಂಗಳೂರಿನ ಶಾಲಾ-ಕಾಲೇಜಿಗೆ ಬಾಂಬ್ ಬೆದರಿಕೆ ಮೇಲ್ ಕಳುಹಿಸಿದ್ದಳು. ಆದರೆ ಅಸಲಿಗೆ ಆರೋಪಿತೆ ತನ್ನನ್ನು ಪ್ರೀತಿಸುತ್ತಿದ್ದಾಳೆಂಬ ವಿಷಯ ಯುವಕನಿಗೆ ಗೊತ್ತಿರಲಿಲ್ಲ ಎಂದು ತನಿಖೆ ವೇಳೆ ತಿಳಿದುಬಂದಿದೆ.

ಆರೋಪಿತೆ VPN, ಇಂಟರನೆಟ್ ಬಳಕೆ ಮಾಡುತ್ತಿದ್ದಳು. ಗೇಟ್ ಕೋಡ್ ಎಂಬ ಅಪ್ಲಿಕೇಶನ್‌ನ ವರ್ಚುವಲ್ ಮೊಬೈಲ್ ನಂಬರ್ ಪಡೆದುಕೊಳ್ಳುತ್ತಿದ್ದಳು. ಸುಮಾರು ಆರರಿಂದ ಏಳು ವಾಟ್ಸಪ್ ಖಾತೆಗಳನ್ನು ನಿರ್ವಹಣೆ ಮಾಡುತ್ತಿದ್ದಳು. ಬಾಡಿ ವಾರೆಂಟ್ ಮುಖಾಂತರ ಗುಜರಾತ್‌ನಿಂದ ಕರೆದುಕೊಂಡು ಬಂದು ವಿಚಾರಣೆ ನಡೆಸಲಾಗುತ್ತಿದೆ. ವಿಚಾರಣೆ ವೇಳೆ ಬೆಂಗಳೂರಿನ ಕಲಾಸಿಪಾಳ್ಯ ಸೇರಿ ಇತರೆ ಆರು ಪ್ರಕರಣಗಳಲ್ಲಿ ಭಾಗಿಯಾಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ. ಆರೋಪಿತೆ ವಿರುದ್ಧ ಗುಜರಾತ್, ಮೈಸೂರು, ತಮಿಳುನಾಡಿನ ಚೆನ್ನೈನಲ್ಲಿ ಹುಸಿಬಾಂಬ್ ಬೆದರಿಕೆ ಪ್ರಕರಣ ದಾಖಲಾಗಿದೆ

# 40 ವರ್ಷದ ಮಹಿಳೆ ಮೇಲೆ 14 ವರ್ಷದ ಬಾಲಕನಿಂದ ಲೈಂಗಿಕ ದೌರ್ಜನ್ಯ

**ಹಮೀರ್‌ಪುರ:** ಹದಿನಾಲ್ಕು ವರ್ಷದ ಬಾಲಕನೊಬ್ಬ 40 ವರ್ಷದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯನಡೆಸಿರುವ ಆತಂಕಕಾರಿ ಘಟನೆ ಉತ್ತರ ಪ್ರದೇಶದ, ಹಮೀರ್‌ಪುರದಲ್ಲಿ ನಡೆದಿದೆ. ಆಕೆ ಸಹಕರಿಸದಿದ್ದಾಗ ಮಾರಣಾಂತಿಕ ಹಲ್ಲೆ ನಡೆಸಿ ಕೊಲೆ ಮಾಡಿರುವ ಘಟನೆ ವರದಿಯಾಗಿದೆ. ಪೊಲೀಸರು ನೀಡಿರುವ ಮಾಹಿತಿ ಪ್ರಕಾರ, ನವೆಂಬರ್ 3 ರಂದು ಈ ಘಟನೆ ನಡೆದಿದೆ. ಹೊಲದಲ್ಲಿ ಹುಲ್ಲು ಕಡಿಯುತ್ತಿದ್ದಾಗ 9 ನೇ ತರಗತಿಯ ಬಾಲಕ ಮಹಿಳೆಯ ಮೇಲೆ ಹಲ್ಲೆ ನಡೆಸಿದ್ದಾನೆ.

ಆ ಬಾಲಕ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಲು ಪ್ರಯತ್ನಿಸಿದಾಗ ಆಕೆ ವಿರೋಧಿಸಿದ್ದಾಳೆ. ನಂತರ ಕತ್ತಿ ಮತ್ತು ಕೋಲಿನಿಂದ ಆಕೆಯ ಮೇಲೆ ಹಲ್ಲೆ ನಡೆಸಿ ತೀವ್ರ ಗಾಯಗೊಳಿಸಿದ್ದಾನೆ ಎಂದು ಆರೋಪಿಸಲಾಗಿದೆ.

ಹೊಲದಲ್ಲಿ ರಕ್ತಸ್ರಾವವಾಗುತ್ತಿದ್ದ ಆಕೆಯನ್ನು ಗ್ರಾಮಸ್ಥರು ಕಂಡು ಹತ್ತಿರದ ಆಸ್ಪತ್ರೆಗೆ ಕರೆದೊಯ್ದರು. ನಂತರ ಆಕೆಯನ್ನು ಚಂಡೀಗಢದ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು, ಆದರೆ ಬುಧವಾರ ರಾತ್ರಿ ಚಿಕಿತ್ಸೆ ಫಲಕಾರಿಯಾಗದೆ ಆಕೆ ಸಾವನ್ನಪ್ಪಿದ್ದಾರೆ.

ಅಪರಾಧ ಸ್ಥಳದಿಂದ ಪೊಲೀಸರು ಒಂದು ಕತ್ತಿ, ಕೋಲು, ಮುರಿದ ಮಾಪಕ ಮತ್ತು ಪೆನ್ನಿನ ತುಂಡುಗಳನ್ನು ವಶಪಡಿಸಿಕೊಂಡಿದ್ದಾರೆ. ವಿಚಾರಣೆಯ ಸಮಯದಲ್ಲಿ, ಅಪ್ರಾಪ್ತ ಬಾಲಕ ತಾನೇ ದಾಳಿ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ವರದಿಯಾಗಿದೆ. ತನ್ನ 17 ವರ್ಷದ ಅಂಗವಿಕಲ ಮಗನನ್ನು ಬೆಳೆಸುತ್ತಿದ್ದ ಆ ಮಹಿಳೆ, ಅವರ ಕುಟುಂಬಕ್ಕೆ ಏಕೈಕ ಆಧಾರವಾಗಿದ್ದಳು.

ಅಪ್ರಾಪ್ತ ಆರೋಪಿ ಬಂಧನದಲ್ಲಿದ್ದಾನೆ ಮತ್ತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಹಮೀರ್‌ಪುರ ಪೊಲೀಸ್ ವರಿಷ್ಠಾಧಿಕಾರಿ ರಾಜೇಶ್ ಉಪಾಧ್ಯಾಯ ದೃಢಪಡಿಸಿದ್ದಾರೆ. ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ

# ಅಕ್ರಮ ಪಡಿತರ ಸಾಗಾಟ – ಆರೋಪಿ ಅರೆಸ್ಟ್, 76 ಮೂಟೆ ರಾಗಿ ವಶ



**ದಾವಣಗೆರೆ:** ಅಕ್ರಮವಾಗಿ ಪಡಿತರ ರಾಗಿ ಸಾಗಾಟ ಮಾಡುತ್ತಿದ್ದ ಆರೋಪಿಯನ್ನು ದಾವಣಗೆರೆ ಬಡಾವಣೆ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಂಧಿತನನ್ನು ಇರ್ಷಾದ್ ಅಲಿ ಎಂದು ಗುರುತಿಸಲಾಗಿದೆ. ನಗರದ ಪಿಜೆ ಬಡಾವಣೆಯ ಮೋತಿ ವೀರಪ್ಪ ಕಾಲೇಜು ಬಳಿ ಗೂಡ್ಸ್ ವಾಹನದಲ್ಲಿ ಆರೋಪಿ ಅಕ್ರಮವಾಗಿ ಪಡಿತರ ರಾಗಿ ಸಾಗಾಟ ಮಾಡುತ್ತಿದ್ದ. ಈ ಬಗ್ಗೆ ಖಚಿತ ಮಾಹಿತಿ ಆಧಾರದ ಮೇಲೆ ಪೊಲೀಸರು ದಾಳಿ ನಡೆಸಿದ್ದಾರೆ.

ದಾಳಿ ವೇಳೆ ವಾಹನದಲ್ಲಿದ್ದ ರಾಗಿ ಮೂಟೆಗಳ ಬಿಲ್ ಕೊಡುವಂತೆ ಆರೋಪಿ ಬಳಿ ಕೇಳಿದ್ದಾರೆ. ಆಗ ಆತ ಮಲೇಬೆನ್ನೂರು ಗ್ರಾಮದ ಸುತ್ತಮುತ್ತ ಗ್ರಾಮಗಳಲ್ಲಿ ಜನಗಳಿಂದ ಕಡಿಮೆ ಬೆಲೆಗೆ ಪಡಿತರ ರಾಗಿಯನ್ನು ಖರೀದಿಸಿ ಎಪಿಎಂಸಿಯಲ್ಲಿ ಮಾರಾಟ ಮಾಡಲು ಕೊಂಡೊಯ್ಯುತ್ತಿರುವುದಾಗಿ ತಿಳಿಸಿದ್ದಾನೆ. ಅಕ್ರಮವಾಗಿ ಪಡಿತರ ರಾಗಿಯನ್ನು ಮಾರಾಟ ಮಾಡಲು ಸಾಗಿಸುತ್ತಿರುವುದು ಖಚಿತವಾದ ಹಿನ್ನೆಲೆಯಲ್ಲಿ ಆರೋಪಿ ಇರ್ಷಾದ್ ಅಲಿಯನ್ನು ಬಂಧಿಸಿದ್ದಾರೆ.

ಬಂಧಿತನಿಂದ 1.13 ಲಕ್ಷ ಮೌಲ್ಯದ 76 ಮೂಟೆಯಲ್ಲಿದ್ದ 3,770 ಕೆಜಿ ಪಡಿತರ ರಾಗಿ ಹಾಗೂ ಗೂಡ್ಸ್ ವಾಹನ ವಶಕ್ಕೆ ಪಡೆಯಲಾಗಿದೆ. ಈ ಸಂಬಂಧ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಫಸ್ಟ್‌ನೈಟ್ ವಿಡಿಯೋ ಇಟ್ಕೊಂಡು ಹೆಂಡ್ತಿಗೆ ಗಂಡನಿಂದಲೇ ಬ್ಲ್ಯಾಕ್‌ಮೇಲ್

**ಬೆಂಗಳೂರು:** ಫಸ್ಟ್ ನೈಟ್ ವಿಡಿಯೋ ಇಟ್ಕೊಂಡು ಪತಿಯೇ ಪತ್ನಿಗೆ ಬ್ಲಾಕ್ ಮೇಲ್ ಮಾಡಿರುವ ಘಟನೆ ಬೆಂಗಳೂರಿನ ಅಮೃತಹಳ್ಳಿಯಲ್ಲಿ ಬೆಳಕಿಗೆ ಬಂದಿದೆ.

ಬೆಂಗಳೂರಿನ ಅಮೃತಹಳ್ಳಿಯಲ್ಲಿ ವಾಸವಾಗಿದ್ದ ಸಂತ್ರಸ್ತೆ ಒಂದೂವರೆ ವರ್ಷದ ಹಿಂದೆ ಗೋವಿಂದರಾಜು ಎಂಬಾತನನ್ನ ಪ್ರೀತಿಸಿ ಮದುವೆಯಾಗಿದ್ದು, ಮದುವೆಯಾದ ನಂತರ ಪತಿ ಗೋವಿಂದರಾಜು ಕೆಲಸಕ್ಕೆ ಹೋಗದೇ ಆನ್‌ಲೈನ್ ಬೆಟ್ಟಿಂಗ್ ಗೇಮ್ ಆಡ್ಕೊಂಡು ಮನೆಯಲ್ಲೇ ಇರ್ತಿದ್ನಂತೆ. ಇದರಿಂದ ಬೇಸತ್ತ ಪತ್ನಿ ಗಂಡನ ಮನೆ ಬಿಟ್ಟು ತನ್ನ ತವರು ಆಂಧ್ರಪ್ರದೇಶಕ್ಕೆ ಹೊರಟು ಹೋಗಿದ್ದಳು. ಇದರಿಂದ ಮತ್ತಷ್ಟು ಕೋಪಗೊಂಡ ಪತಿ ಗೋವಿಂದರಾಜು, ಪತ್ನಿ ಮೊಬೈಲ್‌ಗೆ ತಮ್ಮ ಮೊದಲ ರಾತ್ರಿಯ ಅಶ್ಲೀಲ ವಿಡಿಯೋವೊಂದಕ್ಕೆ ಕಳಿಸಿದ್ದಾನೆ.

ಇದನ್ನ ನೋಡಿ ಗಾಬರಿಯಾದ ಪತ್ನಿ ಗಂಡನಿಗೆ ಕರೆ ಮಾಡಿದಾಗ ಪತಿ ಗೋವಿಂದ ಪತ್ನಿಗೆ ಬೆದರಿಕೆ ಹಾಕಿ ಮತ್ತೆ ವಾಪಸ್ ನನ್ನ ಮನೆಗೆ ಬರಬೇಕು. ನಾನ್ ಹೇಳಿದಂಗೆ ಕೇಳ್ಕೊಂಡು ಇರಬೇಕು. ಇಲ್ಲ ಅಂದ್ರೆ ಇಂತಹ ವಿಡಿಯೋಗಳು ಇನ್ನು ಸಾಕಷ್ಟು ಇವೆ. ಅವುಗಳನ್ನು ಸೋಷಿಯಲ್ ಮೀಡಿಯಾದಲ್ಲಿ ಅಪ್ಲೋಡ್ ಮಾಡುವುದಾಗಿ ಪತ್ನಿಗೆ ಬೆದರಿಕೆ ಹಾಕಿದ್ದಾನೆ. ಪತಿಯ ಈ ದುರ್ವತನೆಯಿಂದ ಬೇಸತ್ತ ಪತ್ನಿ, ಪತಿ ಗೋವಿಂದರಾಜು ವಿರುದ್ಧ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ.

# ಬಿಹಾರದಲ್ಲಿ ಎನ್‌ಡಿಎ ಮತ್ತೆ ಅಧಿಕಾರಕ್ಕೆ ಬರಲಿದೆ: ಸಿಎಂ

**ಉತ್ತರ ಪ್ರದೇಶ:** ಮುಖ್ಯಮಂತ್ರಿ ಮತ್ತು ಬಿಜೆಪಿ ಹಿರಿಯ ನಾಯಕ ಯೋಗಿ ಆದಿತ್ಯನಾಥ್ (Yogi Adityanath) ಇಂದು ಬಿಹಾರದಲ್ಲಿ ಭರ್ಜರಿ ಚುನಾವಣಾ ಪ್ರಚಾರ ರ‍್ಯಾಲಿ ನಡೆಸಿದರು. ರಾಜ್ಯದ ಮೋತಿಹಾರಿಯಲ್ಲಿ ನಡೆದ ಈ ಸಭೆಯಲ್ಲಿ ಅಪಾರ ಸಂಖ್ಯೆಯಲ್ಲಿ ಜನರು ಭಾಗವಹಿಸಿದ್ದು , ಸ್ಥಳವು ಜನಸ್ತೋಮದಿಂದ ಕಿಕ್ಕಿರಿದಿತ್ತು. ರ‍್ಯಾಲಿಯಲ್ಲಿ ಭಾಷಣ ಮಾಡಿದ ಯೋಗಿ ಆದಿತ್ಯನಾಥ್, ಬಿಹಾರದಲ್ಲಿ ಎನ್‌ಡಿಎ ಸರ್ಕಾರ ಮತ್ತೆ ಭರ್ಜರಿಯಾಗಿ ಅಧಿಕಾರಕ್ಕೇರಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಬಿಹಾರದಲ್ಲಿ ಪ್ರಸ್ತುತ ನಡೆಯುತ್ತಿರುವ ವಿಧಾನಸಭಾ ಚುನಾವಣೆ ಕುರಿತು ಮಾತನಾಡಿದ ಅವರು, "ಮೊದಲ ಹಂತದ ಚುನಾವಣೆ ನವೆಂಬರ್ 6ರಂದು ಯಶಸ್ವಿಯಾಗಿ ಪೂರ್ಣಗೊಂಡಿದೆ. ಈಗ ನವೆಂಬರ್ 11ರಂದು ಎರಡನೇ ಹಂತದ ಮತದಾನ ನಡೆಯಲಿದ್ದು , ನವೆಂಬರ್ 14ರಂದು ಫಲಿತಾಂಶ ಪ್ರಕಟವಾಗಲಿದೆ. ಜನರ ಆಶೀರ್ವಾದದೊಂದಿಗೆ ಎನ್‌ಡಿಎ ಸರ್ಕಾರ ಮತ್ತೊಮ್ಮೆ ಅಧಿಕಾರಕ್ಕೆ ಬರಲಿದೆ" ಎಂದು ಹೇಳಿದರು.

ಈ ವೇಳೆ ಯೋಗಿ ಆದಿತ್ಯನಾಥ್ ಆರ್‌ಜೆಡಿ ಮತ್ತು ಕಾಂಗ್ರೆಸ್ ಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. "ಬಿಹಾರವು ಭಾರತದ ಇತಿಹಾಸದಲ್ಲಿ ಮಹತ್ವದ ಪಾತ್ರ ವಹಿಸಿರುವ ಪವಿತ್ರ ಭೂಮಿ. ಇದು ನಳಂದ ವಿಶ್ವವಿದ್ಯಾಲಯವನ್ನು ನೀಡಿದ ರಾಜ್ಯ — ಜಗತ್ತಿನ ಮೊದಲ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿದ್ದು , ಜ್ಞಾನ ಮತ್ತು ಸಂಸ್ಕೃತಿಯ ಬೆಳಕನ್ನು ಹರಡಿತು. ಇದೇ ರಾಜ್ಯವು ಆರ್ಯಭಟ ಎಂಬ ಮಹಾನ್ ವಿಜ್ಞಾನಿ ಮತ್ತು ಗಣಿತಜ್ಞನನ್ನು ನೀಡಿತು. ಆಚಾರ್ಯ ಚಾಣಕ್ಯ, ಗೌತಮ ಬುದ್ಧ ಮತ್ತು 24 ತೀರ್ಥಂಕರರಂತಹ ಮಹಾನ್ ವ್ಯಕ್ತಿತ್ವಗಳನ್ನು ನೀಡಿದ ಈ ಭೂಮಿ, ಭಾರತೀಯ ಸಂಸ್ಕೃತಿಯ ಆದ್ಯಂತ ಕೇಂದ್ರವಾಗಿಯೂ ಉಳಿದಿದೆ" ಎಂದು ಯೋಗಿ ಉಲ್ಲೇಖಿಸಿದರು.

ಆದರೆ ಇಂತಹ ವೈಭವಯುತ ಪರಂಪರೆಯುಳ್ಳ ರಾಜ್ಯವು ಇಂದಿನ ದಿನದಲ್ಲಿ ಸಾಕ್ಷರತೆ ಮತ್ತು ಅಭಿವೃದ್ಧಿಯ ಅಂಶಗಳಲ್ಲಿ ಹಿಂದುಳಿದಿರುವುದಕ್ಕೆ ಆರ್‌ಜೆಡಿ ಮತ್ತು ಕಾಂಗ್ರೆಸ್ ಪಕ್ಷಗಳೇ ಮುಖ್ಯ ಕಾರಣವೆಂದು ಅವರು ಟೀಕಿಸಿದರು. "ಬಿಹಾರವನ್ನು ಕತ್ತಲೆಯ ದಾರಿಗೆ ತಳ್ಳಿದವರು ಈ ಎರಡು ಪಕ್ಷಗಳು. ಅವರ ಆಡಳಿತದಲ್ಲಿ ಜನರ ಮೂಲಭೂತ ಅಗತ್ಯಗಳು ನಿರ್ಲಕ್ಷ್ಯಗೊಂಡುವು. ಇಂದು ಎನ್‌ಡಿಎ ಸರ್ಕಾರ ಅಭಿವೃದ್ಧಿಯ ಹೊಸ ಯುಗವನ್ನು ಆರಂಭಿಸಿದೆ, ಮತ್ತು ಜನರ ವಿಶ್ವಾಸವೂ ನಮ್ಮತ್ತಿದೆ" ಎಂದು ಹೇಳಿದರು.

ಯೋಗಿ ಆದಿತ್ಯನಾಥ್ ತಮ್ಮ ಭಾಷಣದ ಕೊನೆಯಲ್ಲಿ ಮತದಾರರಿಗೆ ಕರೆ ನೀಡುತ್ತಾ, "ಬಿಹಾರದ ಅಭಿವೃದ್ಧಿಗಾಗಿ, ಯುವಕರ ಭವಿಷ್ಯಕ್ಕಾಗಿ, ದೇಶದ ಬಲವಾದ ನಾಯಕತ್ವಕ್ಕಾಗಿ — ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ, ಬಿಹಾರದಲ್ಲಿ ಸುವ್ಯವಸ್ಥೆ ಮತ್ತು ಪ್ರಗತಿಗೆ ದಾರಿ ಮಾಡಿಕೊಡಿ" ಎಂದು ಮನವಿ ಮಾಡಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.